# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 282 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 31–05–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 282 | Title- Code: KARKAN 28269 | Chitradurga | Date: 31-05-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಚಳ್ಳಕೆರೆ ತಾಲ್ಲೂಕಿನಾದ್ಯಂತ 45ಕಂದಾಯ, 5 ಉಪಕಂದಾಯ ಗ್ರಾಮ ಗುರುತು 2
ನನ್ನ ಕೈಹಿಡಿಯಲಿವೆ ಅಭಿವೃದ್ಧಿ ಕಾರ್ಯಗಳು: ಪರಿಷತ್ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ 3
ರಾಷ್ಟ್ರ ಅಥವಾ ದೇಶ ಎಂದರೇನು? 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಶಾಲೆಯಿಂದ ಹೊರಗುಳಿದ ಮಕ್ಕಳ ಮುಖ್ಯವಾಹಿನಿಗೆ ತನ್ನಿ: ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಸೂಚನೆ

» ಚಿತ್ರದುರ್ಗ



ಬಾಲಕಾರ್ಮಿಕರನ್ನು ಗುರುತಿಸಿ, ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಕಾರ್ಮಿಕ ನಿರೀಕ್ಷಕರು ಹೆಚ್ಚಿನ ಮುತುವರ್ಜಿ ವಹಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಜತೆಗೆ ವಸತಿ ಶಾಲೆಗಳಿಗೆ ಪ್ರವೇಶಾತಿ ನೀಡಲು ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನ ಆಚರಣೆಗೆ ಸಂಬಂಧಿಸಿದಂತೆ ಜಿಲ್ಲಾಮಟ್ಟದ ಕಾರ್ಯಕಾರಿ ಸಮಿತಿ ಮತ್ತು ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಮಿಕ ಅಧಿಕಾರಿಗಳು ತಾಲ್ಲೂಕುವಾರು ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿಯನ್ನು ಪಡೆದು, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಕೆಲಸ ಮಾಡಬೇಕು. ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗಬಾರದು ಎಂದು ಸೂಚನೆ ನೀಡಿದರು.

ಮಂಡಕ್ಕಿ ಭಟ್ಟಿ, ಇಟ್ಟಿಗೆ ಭಟ್ಟಿ, ಗ್ಯಾರೇಜ್‌ಗಳಲ್ಲಿ ಬಾಲಕಾರ್ಮಿಕರು ಕಾರ್ಯನಿರ್ವಹಿಸುವ ಸಂಭವ ಹೆಚ್ಚಾಗಿರುವುದರಿಂದ ಕಾರ್ಮಿಕ ನಿರೀಕ್ಷಕರು ನಿಯಮಿತವಾಗಿ ದಾಳಿ ನಡೆಸಿ ತಪಾಸಣೆ ಮಾಡಬೇಕು ಎಂದು ತಿಳಿಸಿದ ಅವರು, ಬಾಲ್ಯಾ ಮತ್ತು ಕಿಶೋರಾವಸ್ಥೆಯ ಕಾರ್ಮಿಕ ಪದ್ದತಿ ಬಗ್ಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸಿರುದ್ದಿನ್ ಮಾತನಾಡಿ, ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ 764 ಮಕ್ಕಳು ಶಾಲೆಯಿಂದ ಹೊರಗುಳಿದಿದ್ದು, ಪೋಷಕರ ವಲಸೆ ಕಾರಣದಿಂದಾಗಿ ಮೊಳಕಾಲ್ಮುರು ಹಾಗೂ ಹೊಸದುರ್ಗ ತಾಲ್ಲೂಕಿನಲ್ಲಿ ಹೆಚ್ಚಿನ ಮಕ್ಕಳು ಶಾಲೆಯಿಂದ ಹೊರಗುಳಿದಿದ್ದಾರೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಕ್ರಮವಹಿಸಲಾಗುತ್ತಿದೆ ಎಂದರು.

ಕಾರ್ಮಿಕ ಅಧಿಕಾರಿ ಜಿ.ಬಿ.ಚಂದ್ರಶೇಖರಯ್ಯ ಮಾತನಾಡಿ, 2024ರ ಜೂನ್ 12ರಂದು ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನ ಆಚರಣೆ ಅಂಗವಾಗಿ ಅಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಮೀಪದ ಒನಕೆ ಓಬವ್ವ ವೃತ್ತದವರೆಗೂ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗುವುದು. ಜಾಥಾ ಕಾರ್ಯಕ್ರಮದಲ್ಲಿ 400 ಕ್ಕೂ ಶಾಲಾ ಮಕ್ಕಳು ಭಾಗವಹಿಸಲಿದ್ದು, ಜಾಗೃತಿ ಫಲಕಗಳು, ಬ್ಯಾನರ್‌ಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿಯೂ ಸಹ ತಹಶೀಲ್ದಾರ್ ನೇತೃತ್ವದಲ್ಲಿ ಕಾರ್ಮಿಕರ ನಿರೀಕ್ಷಕರು ಸಹ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನ ಆಚರಣೆ ಅಂಗವಾಗಿ ಜಾಗೃತಿ ಜಾಥಾ ನಡೆಸಬೇಕು ಎಂದು ಹೇಳಿದರು.

ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನದ ಕಾರ್ಯಕ್ರಮಕ್ಕೆ ಎಲ್ಲಾ ಸರ್ಕಾರಿ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು. ಜಿಲ್ಲೆಯ ಮತ್ತು ತಾಲ್ಲೂಕುಗಳ, ಗ್ರಾಮ ಮಟ್ಟದ ಎಲ್ಲಾ ಸರ್ಕಾರಿ ಇಲಾಖೆಗಳು, ಕಚೇರಿಗಳು ಮತ್ತು ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದಿಲ್ಲವೆಂಬ "ಪ್ರಮಾಣ ವಚನ" ಸ್ವೀಕರಿಸಬೇಕು ಎಂದು ಹೇಳಿದರು.

ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಪಾನ್–ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೇನ್ ಆಫ್ ಚೈಲ್ಡ್ ಅಂಡ್ ಅಡೋಲ್ಸೆಂಟ್ ರಕ್ಷಣಾ ಕಾರ್ಯಾಚರಣೆ ಪ್ರಯುಕ್ತ 2024ರ ಜೂನ್ 01 ರಿಂದ 30 ರವರೆಗೆ ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆಯ ಕಾರ್ಮಿಕರನ್ನು ಪತ್ತೆ ಹಚ್ಚಲು ಕಾರ್ಯಾಚರಣೆ ನಡೆಸಲಾಗುವುದು ಎಂದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕುಮಾರಸ್ವಾಮಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸುಬ್ರನಾಯಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಭಾರತಿ ಆರ್ ಬಣಕಾರ್, ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಮಲ್ಲಿಕಾರ್ಜುನ್, ತಹಶೀಲ್ದಾರ್ ಡಾ.ನಾಗವೇಣಿ, ಕಾರ್ಮಿಕ ನಿರೀಕ್ಷಕ ರಾಜಣ್ಣ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಮೇ.31ರಂದು ವಿಶ್ವ ತಂಬಾಕು ರಹಿತ ದಿನ: ಕಾನೂನು ಅರಿವು-ನೆರವು ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ತಂಬಾಕು ನಿತಂತ್ರಣ ಕೋಶ ಇವರುಗಳ ಸಂಯುಕ್ತಾಶ್ರಯದಲ್ಲಿ ಇದೇ ಮೇ.31ರಂದು ಬೆಳಿಗ್ಗೆ 9.30ಕ್ಕೆ ಚಿತ್ರದುರ್ಗ ನಗರದ ಅಮೃತ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಕಾನೂನು ಅರಿವು–ನೆರವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಉಜ್ವಲ ವೀರಣ್ಣ ಸಿದಣ್ಣವರ್ ಕಾರ್ಯಕ್ರಮ ಉದ್ಘಾಟಿಸುವರು. ಅಮೃತ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲ ಡಾ.ಎಂ.ಎಸ್.ಪ್ರಶಾಂತ್ ಅಧ್ಯಕ್ಷತೆ ವಹಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಘನ ಉಪಸ್ಥಿತಿ ವಹಿಸುವರು. ಮುಖ್ಯ ಅತಿಥಿಗಳಾಗಿ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಕಾರ್ಯದರ್ಶಿ ಆರ್. ಗಂಗಾಧರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ ಭಾಗವಹಿಸುವರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಸಹಾಯವಾಣಿ ಆರಂಭ

» ಚಿತ್ರದುರ್ಗ

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ–2024ರ ಸಂಬಂಧ ಶಿಕ್ಷಕರು ಮತ ಚಲಾಯಿಸಲು ಮತದಾರರಿಗೆ ಸಹಾಯ ಮಾಡಲು ಮತದಾರರ ಸಹಾಯವಾಣಿ ಆರಂಭಿಸಲಾಗಿದೆ. ಸಹಾಯವಾಣಿ ಸಂಖ್ಯೆ 08194–1950 ಆಗಿದೆ. ಸಹಾಯವಾಣಿ ಕೇಂದ್ರದಲ್ಲಿ ಮೇ.30 ರಿಂದ ಜೂನ್ 6 ರವರೆಗೆ 24*7 ಕರ್ತವ್ಯ ನಿರ್ವಹಿಸಲು ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ ಎಂದು ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಟಿಟಿಸಿ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರುದುರ್ಗ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಗಳಲ್ಲಿ (ಜಿಟಿಟಿಸಿ) 2024–25ನೇ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭಿಸಿದ್ದು, ಡಿಪ್ಲೊಮಾ ಕೋರ್ಸುಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಜೂನ್ 3 ರವರೆಗೆ ವಿಸ್ತರಿಸಲಾಗಿದೆ. ಪ್ರವೇಶಾತಿ ಪ್ರಕ್ರಿಯೆಯು ಆನ್‌ಲೈನ್ ಮೂಲಕ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ "ಕರ್ನಾಟಕ ಪರೀಕ್ಷಾ ಪ್ರಾಧಿಕಾರದ" ಮೂಲಕ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 155267 ಅಥವಾ ವೆಬ್‌ಸೈಟ್ https://gttc.karnataka.gov.in ಮತ್ತು https://cetonline.karnataka.gov.in/kea ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಂಧ್ರಕ್ಕಿಂತಲೂ ಹೆಚ್ಚಾದ ರಾಜ್ಯದ ಶೇಂಗಾ ದರ: ಕಡಿಮೆಗೆ ರೈತ ಸಂಘದಿಂದ ಮನವಿ

» ಮಹದೇವಪುರ ಶಿವಮೂರ್ತಿ



ಪರಶುರಾಂಪುರ: ಬಡವರ ಬಾದಾಮಿ' ಎಂದು ಕರೆಯುವ 'ಶೇಂಗಾ' ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾಗಿದೆ. ಈ ಭಾಗದಲ್ಲಿ ಸಣ್ಣ ಹಾಗೂ ಅತಿಸಣ್ಣ ರೈತರು ಹೆಚ್ಚಿನ ಸಂಖ್ಯೆಯಲ್ಲಿದ್ದು ಶೇಂಗಾವನ್ನು ನಂಬಿ ಕೃಷಿ ನಡೆಸುತ್ತಿದ್ದಾರೆ. ಸರ್ಕಾರದಿಂದ ವಿತರಿಸುವ ಬಿತ್ತನೆ ಶೇಂಗಾ ಬೀಜದ ದರ ನೆರೆ ಆಂಧ್ರಪ್ರದೇಶದ ದರಕ್ಕಿಂತಲೂ ದುಬಾರಿಯಾಗಿದ್ದು ಅನ್ನದಾತರನ್ನು ಸಂಕಷ್ಟಕ್ಕೆ ಸಿಲುಕಿಸಿದೆ.

ಹೋಬಳಿಯಲ್ಲಿ 22 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರು ಶೇಂಗಾ ಬಿತ್ತನೆಗೆ ಗುರಿ ನಿಗದಿಪಡಿಸಲಾಗಿದೆ. ಉತ್ತಮ ಮಳೆಯಾಗಿದೆ. ಈ ವರ್ಷ ನಿಗದಿತ ಗುರಿ ಪ್ರದೇಶದಲ್ಲಿ ಬಿತ್ತನೆಯಾಗುವ ನಿರೀಕ್ಷೆ ಯಿದೆ. ಆದರೆ ಈ ಬಾರಿ ಶೇಂಗಾ ಹೊರತುಪಡಿಸಿ ಇತರೆ ಬೆಳೆಗಳು 6 ಸಾವಿರ ಹೆಕ್ಟೇರ್ ಗಿಂತಲೂ ಪ್ರದೇಶದಲ್ಲಿ ಬಿತ್ತನೆ ಗುರಿಯಿದೆ.

ಬಿತ್ತನೆ ಬೀಜದ ಶೇಂಗಾ ದರ ರೈತರಿಗೆ ತುಂಬಾ ದುಬಾರಿ–ನೆರೆ ಆಂಧ್ರಪ್ರದೇಶದ ದರಕ್ಕಿಂತಲೂ ಹೆಚ್ಚಿನದಾಗಿದೆ.ಬರಪೀಡಿತ ತಾಲೂಕು ಎಂದು ಘೋಷಣೆಯಾಗಿದೆ.ರೈತರು ಕಷ್ಟದಲ್ಲಿರುವಾಗ ಕಡಿಮೆ ಬೆಲೆಯಲ್ಲಿ ಬಿತ್ತನೆ ನೀಡುವಂತೆ ರೈತ ಸಂಘದವರ ಮನವಿ.

**ನೆರೆ ಆಂಧ್ರಕ್ಕಿಂತಲೂ ರಾಜ್ಯದ ಬಿತ್ತನೆ ಶೇಂಗಾ ದರದಲ್ಲಿ ಹೆಚ್ಚು:** ನೆರೆಯ ಆಂಧ್ರಪ್ರದೇಶದಲ್ಲಿ 90 ಕೆಜಿ ಶೇಂಗಾ ಬೆಲೆ ಸುಮಾರು 5150 ರೂಪಾಯಿ ಆಗಿರುತ್ತದೆ.ರಾಜ್ಯದಲ್ಲಿ ಟಿಎಂವಿ2 ಕ್ವಿಂಟಾಲ್ಗೆ–7600 ರೂಪಾಯಿ,ಟಿ6 –7800 ರೂಪಾಯಿ ಇದರಲ್ಲಿ ಎಸ್ಸಿ,ಎಸ್ಟಿ ರೈತರಿಗೆ ದರದಲ್ಲಿ ಸ್ವಲ್ಪ ಕಡಿಮೆ ಕಾಣಬಹುದಾಗಿದೆ.ಬಿತ್ತನೆ ಶೇಂಗಾ ದರ ಹೆಚ್ಚು ಇರುವುದರಿಂದ ಶೇಂಗಾ ದರವನ್ನು ಪರಿಶೀಲಿಸಿ ಅಲ್ಲಿಗಿಂತಲೂ ರಾಜ್ಯದಲ್ಲಿ ಕಡಿಮೆ ದರ ನಿಗದಿ ಮಾಡಲು ಮನವಿ.

ಪುಟ 2

# ದೊಡ್ಡ ಉಳ್ಳಾರ್ತಿ ಗೋಶಾಲೆಗೆ ಉಪವಿಭಾಗಾಧಿಕಾರಿ ಕಾರ್ತಿಕ್



**ಚಳ್ಳಕೆರೆ:** ತಾಲ್ಲೂಕಿನ ಮೊಳಕಾಲ್ಮೂರು ವಿಧಾನಸಭಾ ವ್ಯಾಪ್ತಿಯ ದೊಡ್ಡ ಉಳ್ಳಾರ್ತಿ ಗೋಶಾಲೆಗೆ ಗುರುವಾರ ಮಧ್ಯಾಹ್ನ ಭೇಟಿ ನೀಡಿದ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಗೋಶಾಲೆಯಲ್ಲಿರುವ ಜಾನುವಾರುಗಳ ಸಂಖ್ಯೆ ಹಾಗೂ ಸರಬರಾಜಾಗಿರುವ ಮೇವಿನ ವಿತರಣೆಯ ಬಗ್ಗೆ ಮಾಹಿತಿ ಪಡೆದರು. ಗೋಶಾಲೆಯಲ್ಲಿರುವ ಜಾನುವಾರುಗಳಿಗೆ ಲಭ್ಯವಿರುವ ಮೇವನ್ನು ನಿಗದಿತ ಸಮಯದಲ್ಲಿ ನೀಡಬೇಕು, ಯಾವುದೇ ಕಾರಣಕ್ಕೂ ವಿಳಂಬ ಅನುಸರಿಬಾರದು, ಮೇವು ವಿತರಣೆಯಲ್ಲಿ ಪಾರದರ್ಶಕತೆ ಇರಲಿ, ಮೇವು ವಿತರಣೆಯಲ್ಲಿ ಯಾವುದೇ ಅವ್ಯಹಾರದ ಆಗದಂತೆ ಎಚ್ಚರಿಕೆ ವಹಿಸಬೇಕು. ಜಾನುವಾರುಗಳ ಮೇವು ತಿನ್ನುವ ಸಂದರ್ಭದಲ್ಲಿ ಹಾಳಾಗದಂತೆ ಎಚ್ಚರಿಕೆ ವಹಿಸಬೇಕು, ಕಾಲಕಾಲಕ್ಕೆ ಜಾನುವಾರುಗಳ ಆರೋಗ್ಯ ತಪಾಸಣೆ ನಡೆಸುವಂತೆ ಸೂಚನೆ ನೀಡಿದರು.

## ಪ್ರಮುಖ ಸುದ್ದಿ

# ಸಚಿವ ನಾಗೇಂದ್ರ ರಾಜೀನಾಮೆ ಕೊಡುವ ಪ್ರಶ್ನೆ ಇಲ್ಲ

» ಚಿತ್ರದುರ್ಗ



ವಾಲ್ಮೀಕಿ ನಿಗಮ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆಗೆ ಸಚಿವ ನಾಗೇಂದ್ರ ರವರು ಕಾರಣರಲ್ಲ, ಬಿಜೆಪಿ ಕುತಂತ್ರದಿಂದ ರಾಜಕೀಯ ಷಡ್ಯಂತ್ರ ಮಾಡಿ ಇವರ ರಾಜೀನಾಮೆ ಕೇಳುತ್ತಿದ್ದಾರೆ, ಯಾವುದೇ ಕಾರಣಕ್ಕೂ ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬಾರದೆಂದು ಕರ್ನಾಟಕ ದ್ರಾಕ್ಷರಸ ಮಂಡಳಿಯ ಅಧ್ಯಕ್ಷ ಡಾ.ಬಿ.ಯೋಗಿಶ್ ಬಾಬು ಒತ್ತಾಯಿಸಿ ಬಿಜೆಪಿ ವಿರುದ್ದ ಕಿಡಿಕಾರಿದ್ದಾರೆ.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಆಧಿಕಾರಿ ಚಂದ್ರಶೇಖರ್ ತಮ್ಮ ಡೆತ್‌ನೋಟ್ ನಲ್ಲಿ ಸ್ಪಷ್ಟವಾಗಿ ಬರೆದಿದ್ದಾರೆ.

ನನ್ನ ಸಾವಿಗೆ ನನ್ನ ಮೇಲಿನ ಅಧಿಕಾರಿಗಳು ಕಾರಣರಾಗಿದ್ದಾರೆ. ಇದರಲ್ಲಿ ಸಚಿವರ ಪಾತ್ರ ಇಲ್ಲ ಎಂದು ತಿಳಿಸಿದ್ದರು ಸಹಾ ಬಿಜೆಪಿಗರು ಸಚಿವರು ಇದರಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿ ರಾಜೀನಾಮೆ ನೀಡುವಂತೆ ಆಗ್ರಹಿಸುತ್ತಿರುವುದು ಸರಿಯಲ್ಲ ಎಂದರು.

ಬಿಜೆಪ ರಾಜ್ಯಾಧ್ಯಕ್ಷ ಬಿ.ವೈ.ವಿಜೇಯೇಂದ್ರ ಸಹ ರಾಜೀನಾಮೆಗೆ ಆಗ್ರಹಿಸಿದ್ದು ಈ ಪ್ರಕರಣರಲ್ಲಿ ಸಚಿವರ ಪಾತ್ರ ಏನು ಇಲ್ಲ ಎಂದು ಸ್ಪಷ್ಟವಾಗಿರುವಾಗ ಬಿಜೆಪಿ ರಾಜಕೀಯ ಷಡ್ಯಂತ್ರದಿಂದ ಸಚಿವರ ರಾಜೀನಾಮೆ ಕೇಳುತ್ತಿರುವುದು ದುರಾದೃಷ್ಟಕರವಾಗಿದೆ.

ಈ ಪ್ರಕರಣದಲ್ಲಿ ಸಂಬಂಧಿಸಿದವರ ವಿರುದ್ಧ ಮತ್ತು ಮಂಡಳಿಯ ಅಧಿಕಾರಿಗಳನ್ನು ಸರ್ಕಾರ ಈಗಾಗಲೇ ಅಮಾನತ್ತು ಮಾಡಿದೆ. ಅಲ್ಲದೆ ನಿಗಮದಿಂದ ಹೋದ ಹಣವನ್ನು ಸಹಾ ವಾಪಾಸ್ಸು ಮಾಡಲು ಸೂಚನೆಯನ್ನು ಸಹ ನೀಡಲಾಗಿದ್ದು ಇಷ್ಟಾದರೂ ಸಹಾ ಬಿಜೆಪಿ ರಾಜೀನಾಮೆಯನ್ನು ಕೇಳುತ್ತಿರುವುದು ರಾಜಕೀಯ ದೃಷ್ಟಿಯಿಂದ ಮಾತ್ರವಾಗಿದೆ.

ನಾಗೇಂದ್ರ ಅವರಹ ನಮ್ಮ ನಾಯಕ ಜನಾಂಗದಲ್ಲಿ ಯುವ ನಾಯಕರಾಗಿದ್ದರೆ. ಇವರು ತಮ್ಮ ಇಲಾಖೆಯಲ್ಲಿ ಯಾವುದೇ ರೀತಿಯ ಕಳಂಕ ಇಲ್ಲದೆ ನಡೆಸುತ್ತಿದ್ದಾರೆ. ಇದು ಅಧಿಕಾರಿಗಳು ಮಾಡಿದ ಎಡವಟ್ಟಿನಿಂದ ಆದ ಪ್ರಕರಣವಾಗಿದೆ.

ಈ ಹಿನ್ನಲೆಯಲ್ಲಿ ಸರ್ಕಾರವೂ ಸಹಾ ಇದರ ಬಗ್ಗೆ ತನಿಖೆಯನ್ನು ನಡೆಸಲು ಸೂಚನೆಯನ್ನು ನೀಡಿದೆ ತನಿಖಾ ವರದಿ ಬರುವವರೆಗೂ ಸಹಾ ಬಿಜೆಪಿಗೆ ತಾಳ್ಮೆ ಇಲ್ಲವಾಗಿದೆ ಎಂದು ದೂರಿದರು.

ಮೃತ ಚಂದ್ರಶೇಖರ್ ರವರ ಪತ್ನಿಯೂ ಸಹಾ ಈ ಪ್ರಕರಣದಲ್ಲಿ ಸಚಿವರ ಪಾತ್ರ ಯಾವುದು ಇಲ್ಲ, ನಿಗಮದ ಮೇಲಿನ ಆಧಿಕಾರಿಗಳು ಒತ್ತಡದಿಂದ ಈ ರೀತಿ ಮಾಡಲಾಗಿದೆ ಎಂದಿದ್ದಾರೆ.

ಈ ಹಿನ್ನಲೆಯಲ್ಲಿ ಅಧಿಕಾರಿಗಳಿಗೆ ಶಿಕ್ಷೆಯನ್ನು ಕೊಡಿ ಎಂದಿದ್ದಾರೆ ಹೊರತು ಸಚಿವರ ರಾಜೀನಾಮೆಯನ್ನು ಕೇಳಿಲ್ಲ. ಚಂದ್ರಶೇಖರ್ ಆತ್ಮಹತ್ಯೆಗೆ ಸರ್ಕಾರ ಮತ್ತು ಸಚಿವರು ಸಾಂತ್ವಾನ ಹೇಳಿದ್ದಾರೆ. ಬಿಜೆಪಿ ಸಚಿವರ ರಾಜೀನಾಮೆಗೆ ಮುಂದುವರೆದರೆ ನಮ್ಮ ಜನಾಂಗ ಮತ್ತು ಪಕ್ಷದ ವತಿಯಿಂದ ರಾಜೀನಾಮೆ ನೀಡಬೇಡಿ ಎಂದು ನಾವು ಸಹಾ ಹೋರಾಟವನ್ನು ಮಾಡಲಾಗುವುದು ಎಂದು ಯೋಗೀಶ್ ಬಾಬು ಬಿಜೆಪಿಗೆ ಎಚ್ಚರಿಸಿದರು.ಪತ್ರಿಕಾಗೋಷ್ಠಿಯಲ್ಲಿ ಕೆಪಿಸಿಸಿ ವಕ್ತಾರ ಬಾಲಕೃಷ್ಣಯಾದವ್, ಮಧುಪಾಲೇ ಗೌಡ, ಜಯ್ಯಣ್ಣ, ಮಂಜುನಾಥ್, ಪ್ರಶಾಂತ್,ಬಚ್ಚಪ್ಪರನಹಟ್ಟಿ ಬಸವರಾಜ್, ಸುನೀಲ್, ಸಂದೀಪ್ ಇದ್ದರು.

## ಫಾಸ್ಟ್ ನ್ಯೂಸ್

### ಆಂಧ್ರಕ್ಕಿಂತಲೂ ಹೆಚ್ಚಾದ ಶೇಂಗಾ ದರ: ಕಡಿಮೆಗೆ ರೈತ ಸಂಘದಿಂದ ಮನವಿ



» **ಮೊದಲ ಪುಟದಿಂದ**

ಹೋಬಳಿ ಜಿಲ್ಲೆಯ ಗಡಿ ಭಾಗವಾಗಿದ್ದು ಕೇವಲ ಎಂಟತ್ತು ಕಿ.ಮೀ.ದೂರದಲ್ಲಿ ಆಂಧ್ರಪ್ರದೇಶದ ಗ್ರಾಮಗಳಿವೆ. ಇದರಿಂದ ಇಲ್ಲಿಯ ರೈತರು ಅಲ್ಲಿಂದಲೇ ಶೇಂಗಾ ಖರೀದಿಸುತ್ತಿದ್ದಾರೆ. ಪ್ರತಿ ವರ್ಷ ರೈತ ಸಂಪರ್ಕ ಕೇಂದ್ರದಲ್ಲಿ ಕೊಳ್ಳುವವರ ಸಂಖ್ಯೆ ಕಡಿಮೆಯಾಗುತ್ತಿದೆ ಎನ್ನುವುದು ರೈತರ ಅನಿಸಿಕೆ.

**ಕಡಿಮೆ ಬೆಲೆಯಲ್ಲಿ ಬಿತ್ತನೆ ಶೇಂಗಾ ನೀಡಲು** ಘೋಷಣೆಯಾಗಿರುವ ಚಳ್ಳಕೆರೆ ತಾಲೂಕಿನಲ್ಲಿ ನೆರೆಯ ಆಂಧ್ರ ರಾಜ್ಯದಲ್ಲಿ ನೀಡುವ ಬೆಲೆಗಿಂತಲೂ ಕಡಿಮೆ ನಿಗದಿಪಡಿಸಬೇಕೆಂದು ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಣ್ಣ, ಉಪಾಧ್ಯಕ್ಷ ಜಂಪಣ್ಣ, ಕಾರ್ಯಾಧ್ಯಕ್ಷ ಹನುಮಂತಪ್ಪ,ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್, ಮುಖಂಡರಾದ ಖಾದರ್ ಭಾಷಾ, ಪರಶುರಾಂಪುರ ಹೋಬಳಿ ಅಧ್ಯಕ್ಷ ನವೀನ್ ಗೌಡ, ಉಪಾಧ್ಯಕ್ಷ ಕೊಂಡ್ಲಿ ಪರಮೇಶಪ್ಪ, ಗೆಂಡೆ ತಿಮ್ಮಣ್ಣ ವೃಷಭೇಂದ್ರಪ್ಪ ಅಣ್ಣಪ್ಪ ಸ್ವಾಮಿ ಸೇರಿದಂತೆ ರೈತರು ಮನವಿ ಮಾಡಿದ್ದಾರೆ.

### ವೃತ್ತಿ ಮಾರ್ಗದರ್ಶನ ಕಾರ್ಯಾಗಾರ

» **ದಾವಣಗೆರೆ**

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗ ಸಂಸ್ಥೆಯಾಗಿರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಪದವಿ ಪೂರ್ವ ವಿದ್ಯಾರ್ಥಿಗಳಿಗಾಗಿ ಕೆರಿಯರ್ ಗೈಡ್‌ನೆಸ್, ಹೈಯರ್ ಎಜುಕೇಶನ್ ಮತ್ತು ಕೆರಿಯರ್ ಅಪಾರ್ಚುನಿಟಿಸ್‌ಗಾಗಿ ಜೂನ್ 1 ಮತ್ತು 3 ರಂದು ಎರಡು ದಿನಗಳ ಕಾರ್ಯಾಗಾರವನ್ನು ಆನ್‌ಲೈನ್ ವೆಮಿನಾರ್ ಮೂಲಕ ಆಯೋಜಿಸಲಾಗಿದೆ. ಜೂನ್.1 ರಂದು ವೆಮಿನಾರ್ ನಂ. 25208106583 ಅಂಡ್ ಪಾಸ್ ವಾರ್ಡ್ ಢಖಏಉ4ಝ84 ಮತ್ತು ಜೂನ್ 3 ರಂದು ವೆಮಿನಾರ್ ನಂ.25259292738 ಅಂಡ್ ಪಾಸ್ ವಾರ್ಡ್ ಣಔಫ2ಗಿಣಡಿಥು22 ಇದರೊಂದಿಗೆ ಪದವಿ ಪೂರ್ವ ವಿದ್ಯಾರ್ಥಿಗಳು ಭಾಗವಹಿಸಿ ಉನ್ನತ ವ್ಯಾಸಂಗ ಮತ್ತು ಉತ್ತಮ ಉದ್ಯೋಗಕ್ಕೆ ವಿವರವಾದ ಮಾಹಿತಿಯನ್ನು ಪಡೆಯಬಹುದು. ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ನಾಲ್ಕು ವಿಜ್ಞಾನಿಗಳು ಮೂಲ ವಿಜ್ಞಾನ, ಕೃಷಿ, ವೈದ್ಯಕೀಯ ಮತ್ತು ಇಂಜಿನಿಯರಿಂಗ್ ವ್ಯಾಸಂಗದ ಬಗ್ಗೆ ಸಲಹೆಗಳನ್ನು ನೀಡಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಉಮೇಶ ಘಾಟಗೆ – 9743084194 & ಚಂದ್ರಶೇಖರಮೂರ್ತಿ – 9686449019 ಅಥವಾ ವೆಬ್ ಸೈಟ್; www.kstacademy.in ವೀಕ್ಷಿಸಬಹುದಾಗಿದೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎ.ಎಂ. ರಮೇಶ್ ತಿಳಿಸಿದ್ದಾರೆ.

### ಡಿಪ್ಲೋಮಾ ಆಫ್‌ಲೈನ್ ಅರ್ಜಿ ಆಹ್ವಾನ

» **ದಾವಣಗೆರೆ**

ಶ್ರೀ ಕೆಂಗಪ್ಪ ನಾಯಕ ಸರ್ಕಾರಿ ಪಾಲಿಟೆಕ್ನಿಕ್ ದಾಗಿನಕಟ್ಟೆ ಸಂಸ್ಥೆಗೆ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಕಂಪ್ಯೂಟರ್ ಸೈನ್ಸ್ ಮತ್ತು ಎಲೆಕ್ಟ್ರಾನಿಕ್ ಅಂಡ್ ಕಮ್ಯೂನಿಕೇಷನ್ ವಿಭಾಗಗಳಲ್ಲಿ ಖಾಲಿ ಇರುವ ಸೀಟುಗಳಿಗೆ ಮೆರಿಟ್ ಆಧಾರಿತ ಆಫ್–ಲೈನ್ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಕನಿಷ್ಠ ಶೇ.35 ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 4 ಕೊನೆಯ ದಿನವಾಗಿರುತ್ತದೆ. ವಿದ್ಯಾರ್ಥಿಗಳು ಖುದ್ದಾಗಿ ಸಂಸ್ಥೆಗೆ ಭೇಟಿ ನೀಡಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಶ್ರೀ ಕೆಂಗಪ್ಪ ನಾಯಕ ಸರ್ಕಾರಿ ಪಾಲಿಟೆಕ್ನಿಕ್ ದಾಗಿನಕಟ್ಟೆ ಇವರನ್ನು ಅಥವಾ ದೂ.ಸಂ.9448414180, 9844197172, 8861360348 ಗೆ ಸಂಪರ್ಕಿಸಬೇಕೆಂದು ಶ್ರೀಕೆಂಗಪ್ಪ ನಾಯಕ ಸರ್ಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲರು ತಿಳಿಸಿದ್ದಾರೆ.

### ಜೂ.4 ರಂದು ನಿಷೇಧಾಜ್ಞೆ

» **ದಾವಣಗೆರೆ**

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆ ಹಿನ್ನಲೆಯಲ್ಲಿ ದಾವಣಗೆರೆ ಜಿಲ್ಲೆಯಾದ್ಯಂತ ಜೂನ್ 4 ರಂದು ಬೆಳಿಗ್ಗೆ 6 ಗಂಟೆಯಿಂದ ಜೂನ್ 5ರ ಬೆಳಿಗ್ಗೆ 6 ಗಂಟೆಯವರೆಗೆ ನಿಷೇ ಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಆದೇಶಿಸಿರುತ್ತಾರೆ. ದಾವಣಗೆರೆ ಕ್ಷೇತ್ರದ ಮತಎಣಿಕೆ ಕಾರ್ಯ ದಾವಣಗೆರೆ ವಿಶ್ವವಿದ್ಯಾಲಯದ ಕಟ್ಟಡದಲ್ಲಿ ಜೂನ್ 4 ರಂದು ನಡೆಯಲಿದೆ. ಗೆದ್ದಂತಹ ರಾಜಕೀಯ ಅಭ್ಯರ್ಥಿಗಳ ಪರವಾಗಿ ಕಾರ್ಯಕರ್ತರು ಗುಂಪು ಸೇರಿ ಪಟಾಕಿ ಹೊಡೆಯುವುದು, ಪಟಾಕಿ ಸಿಡಿಸುವಂತಿಲ್ಲ, ಗುಂಪು ಸೇರುವಂತಿಲ್ಲ.

---

**ಮಾಧ್ಯಮ ಕಾರ್ಯಾಗಾರದಲ್ಲಿ ಡಿಹೆಚ್‌ಓ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿಕೆ**

# ಡೆಂಗೀ ನಿಯಂತ್ರಣಕ್ಕೆ ಸಹಭಾಗಿತ್ವ ಅವಶ್ಯಕ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಡೆಂಗೀ ಪ್ರಕರಣಗಳು ನಿಯಂತ್ರಣಕ್ಕೆ ಬರುತ್ತಿಲ್ಲ. ಈ ಬಗ್ಗೆ ಸಾರ್ವಜನಿಕರಲ್ಲಿಜಾಗೃತಿಮೂಡಿಸಲಾಗಿದೆ. ಡೆಂಗೀ ಹರಡುವ ಸೊಳ್ಳೆಗಳ ನಿಯಂತ್ರಣ ಮಾಡುವಲ್ಲಿ ಸಾರ್ವಜನಿಕರ ಸಹಭಾಗಿತ್ವ ಅವಶ್ಯಕವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಮತ್ತುದೃಶ್ಯಮಾಧ್ಯಮಪ್ರತಿನಿಧಿಗಳಿಗೆ ಹಮ್ಮಿಕೊಳ್ಳಲಾದ ಮಲೇರಿಯಾ ಮತ್ತು ಇತರೆ ಕೀಟಜನ್ಯ ರೋಗಗಳ ನಿಯಂತ್ರಣ ಕುರಿತಾದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಲಾರ್ವ ಸಮೀಕ್ಷೆ ನಡೆಸಲಾಗುತ್ತಿದೆ. ಪ್ರತಿ ಮನೆ ಮನೆಗಳಿಗೂ ತೆರಳಿ ಸೊಳ್ಳೆಗಳ ನಿಯಂತ್ರಣ ಮಾಡುವ ಬಗ್ಗೆ ಜನರಿಗೆ ತಿಳಿ ಹೇಳಲಾಗುತ್ತಿದೆ. ಆದಾಗ್ಯೂ ಸಾರ್ವಜನಿಕರು ಸೊಳ್ಳೆಗಳ ನಿಯಂತ್ರಣದ ಬಗ್ಗೆ ಆಸಕ್ತಿ ತೋರುತ್ತಿಲ್ಲ. ಸೊಳ್ಳೆ ಕಚ್ಚುವುದರಿಂದ ಮಲೇರಿಯಾ, ಡೆಂಗೀ ಸೇರಿದಂತೆ ಹಲವು ರೋಗಗಳು ಹರಡುತ್ತಿವೆ. ಇದರಿಂದ ಚಿಕಿತ್ಸೆ ನೀಡುವಲ್ಲಿ ತೊಂದರೆ ಉಂಟಾಗುತ್ತಿದೆ. ರೋಗದ ಚಿಕಿತ್ಸೆಗಾಗಿ ಜನರು ಸಹ ಆರ್ಥಿಕವಾಗಿ ಸಂಕಷ್ಟ ಎದುರಿಸುವಂತಾಗುತ್ತದೆ. ಡೆಂಗೀ ಹಾಗೂ ಮಲೇರಿಯಾ ಪ್ರಕರಣಗಳು ಹೆಚ್ಚಾದ ತಕ್ಷಣ ಆರೋಗ್ಯ ಇಲಾಖೆ ಕಾರ್ಯ ವೈಖರಿ ಬಗ್ಗೆ ಎಲ್ಲರೂ ಪ್ರಶ್ನಿಸುತ್ತಾರೆ. ಆದರೆ ಆರೋಗ್ಯ ಇಲಾಖೆ ಹೇಳುವ ಮುಂಜಾಗ್ರತಾ ಕ್ರಮಗಳನ್ನು ಪಾಲಿಸುವುದಿಲ್ಲಎಂದುಡಾ.ರೇಣುಪ್ರಸಾದ್ ಬೇಸರ ವ್ಯಕ್ತಪಡಿಸಿದರು.ಡೆಂಗೀ ಹರಡುವ ಈಡಿಸ್ ಸೊಳ್ಳೆ ಸಾಮಾನ್ಯವಾಗಿ ಹಗಲಿನಲ್ಲಿ ಕಚ್ಚುತ್ತದೆ. ಅದ್ದರಿಂದ ತುಂಬು ತೋಳಿನ ಶರ್ಟ್ ಧರಿಸಿ ಕೆಲಸ ಮಾಡುವುದು ಉತ್ತಮ ಅಭ್ಯಾಸವಾಗಿದೆ. ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಸಬೇಕು. ಮನೆಯ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಚವಾಗಿ ಇರಿಸಿಕೊಳ್ಳಬೇಕು. ಮಳೆಯ ನೀರು ತೆಂಗಿನ ಚಿಪ್ಪು, ಟಯರ್ ಸೇರಿದಂತೆ ಇತರೆ ವಸ್ತುಗಳಲ್ಲಿ ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಡೆಂಗೀ ಹಾಗೂ ಮಲೇರಿಯಾ ಹರಡುವ ಸೊಳ್ಳೆಗಳು ಮಳೆ ಹಾಗೂ ಸ್ವಚ್ಛ ನೀರಿನಲ್ಲಿ ಸಂತಾನೋತ್ಪತ್ತಿ ಮಾಡುತ್ತವೆ. ಹಾಗಾಗಿ ಈ ನೀರಿನ ಆಕರಗಳನ್ನು ಸ್ವಚ್ಚವಾಗಿ ಇರಿಸಬೇಕು. ಸೊಳ್ಳೆ ನಿಯಂತ್ರಣದಲ್ಲಿಧೂಮೀಕರಣಅಷ್ಟೊಂದು ಪರಿಣಾಮಕಾರಿಯಾಗುವುದಿಲ್ಲ. ಧೂಮೀಕರಣದ ವೇಳೆ ಸೊಳ್ಳೆಗಳು ಧೂಮೀಕರಣ ವ್ಯಾಪ್ತಿಯಿಂದ ಹಾರಿ ಹೋಗಿ ಮತ್ತೆ ಹಿಂದಿರುಗುತ್ತವೆ. ಇದರ ಬದಲು ಸೊಳ್ಳೆಗಳ ಲಾರ್ವಾಗಳ ನಿಯಂತ್ರಣಕ್ಕೆ ಗ್ಯಾಂಬೂಸಿಯಾ ಹಾಗೂ ಗಪ್ಪಿ ಮೀನುಗಳನ್ನು ಜಲಮೂಲಗಳಲ್ಲಿ ಸಾಕುವುದು ಉತ್ತಮ ಎಂದು ಡಿಹೆಚ್‌ಓ ಡಾ.ರೇಣುಪ್ರಸಾದ್ ಹೇಳಿದರು.

ಜಿಲ್ಲಾ ಕೀಟಶಾಸ್ತ್ರಜ್ಞೆ ನಂದಿನಿ ಕಡಿ ಸೊಳ್ಳೆಗಳ ನಿಯಂತ್ರಣ ಕ್ರಮಗಳ ಕುರಿತು ಪ್ರಾತ್ಯಕ್ಷಿಕೆ ನಡೆಸಿಕೊಟ್ಟರು. ಈ ವೇಳೆ ಕೇವಲ ತಂಗಿನ ಚಿಪ್ಪು, ಟಯರ್ ಸೇರಿದಂತೆ ದೊಡ್ಡ ನೀರಿನ ಆಕರಗಳಲ್ಲಿ ಮಾತ್ರ ರೋಗವಾಹಕ ಸೊಳ್ಳೆಗಳು ಬೆಳೆಯುತ್ತವೆ ಎಂದು ನಂಬಿಕೆ ಇದೆ. ಆದರೆ ಡೆಂಗೀ ಹಾಗೂ ಮಲೇರಿಯಾ ಹರಡುವ ಸೊಳ್ಳೆಗಳು ಕೇವಲ 5 ಎಂ.ಎಲ್. ನೀರು ಶೇಖರಣೆಯಾಗುವಚಿಕ್ಕಬಾಟಲಿಮುಚ್ಚಳ, ಪ್ಲಾಸ್ಟಿಕ್ ಟೀ ಲೋಟ ಅಥವಾ ಇತರೆ ತ್ಯಾಜ್ಯಗಳಲ್ಲಿ ಸಂತಾನೋತ್ಪತ್ತಿ ನಡೆಸುತ್ತವೆ. ಆದ್ದರಿಂದ ಮನೆಯ ಸುತ್ತ ಮುತ್ತ ಸಣ್ಣ ತ್ಯಾಜ್ಯಗಳಲ್ಲಿಯೂ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘ ಅಧ್ಯಕ್ಷ ದಿನೇಶ್ ಗೌಡಗೆರೆ ಮಾತನಾಡಿ, ಆರೋಗ್ಯ ಇಲಾಖೆ ಕಾರ್ಯಕ್ರಮವು ಅತ್ಯಂತ ಉಪಯುಕ್ತವಾಗಿದೆ. ಇಂತಹ ಕಾರ್ಯಾಗಾರಗಳನ್ನು ತಾಲ್ಲೂಕು ಹಂತ ಪತ್ರಕರ್ತರಿಗೂ ನೀಡಬೇಕು. ಇದಕ್ಕೆ ಪತ್ರಕರ್ತರ ಸಂಘ ಸಹಕಾರ ನೀಡಲಿದೆ ಎಂದರು. ಇದರ ಜೊತೆಗೆ ಆರೋಗ್ಯ ಇಲಾಖೆಯಿಂದ ತಜ್ಞ ವೈದ್ಯರನ್ನು ಕರೆಸಿ ಪತ್ರಕರ್ತರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಬಳಿ ಕೋರಿಕೊಂಡರು. ಕಾರ್ಯಕ್ರಮದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಎನ್.ಕಾಶಿ ಡೆಂಗೀ ಹಾಗೂ ಮಲೇರಿಯಾ ರೋಗದ ಕುರಿತು ಪ್ರಾತ್ಯಕ್ಷತೆ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ವಾರ್ತಾಧಿಕಾರಿ ಎಂ.ಮಾರುತಿ ಉಪಸ್ಥಿತರಿದ್ದರು.




---

# ಶ್ರೀ ಅನ್ನದಾನೇಶ್ವರ ಮಠದಲ್ಲಿ ಬಸವೇಶ್ವರ ಜಯಂತಿ

» **ದಾವಣಗೆರೆ**

ಮಕ್ಕಳಿಗೆ ಪ್ರತಿನಿತ್ಯ 12ನೇ ಶತಮಾನದ ಬಸವೇಶ್ವರರ ಹಾಗೂ ಇನ್ನಿತರ ಶರಣ ಶರಣೆಯರಒಂದೊಂದು ವಚನಗಳನ್ನು ತಿಳಿಸಿಕೊಟ್ಟರೆ ಮುಂದೆಅವರಜೀವನ ಸುಲಭವಾಗುತ್ತದೆಎಂದು ಶ್ರೀ ಸಿದ್ದಗಂಗಾ ವಿದ್ಯಾಸಂಸ್ಥೆಯ ಮುಖ್ಯಸ್ಥೆ ಶ್ರೀಮತಿ ಡಾ. ಜಸ್ಟಿನ್ 'ಡಿ' ಸೌಜಾಅವರುಕರೆ ನೀಡಿದರು.

ಅವರುದೇವರಾಜಅರಸು ಬಡಾವಣೆಯಲಿ್ಲರುವ ಹಾಲಕೆರೆ ಶ್ರೀ ಅನ್ನದಾನೇಶ್ವರ ಶಾಖಾ ಮಠದಲ್ಲಿ ಏರ್ಪಡಿಸಿದ್ದ 269ನೇ ಶಿವಾನುಭವ ಸಂಪದ, ಶ್ರೀ ಬಸವೇಶ್ವರಜಯಂತಿ ಹಾಗೂ ಮಹಿಳಾ ದಿನಾಚರಣೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡುತ್ತಾ, ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮನಸ್ಸಿನ ತಳಮಳ, ಕ್ರೌರ್ಯದೂರವಾಗುತ್ತದೆಎಂದರು.

ಕೋವಿಡ್ ನಂತರ ಮಕ್ಕಳ ಜೀವನ ಶೈಲಿಯೇ ಬದಲಾಗಿದೆ, ಗುರು–ಹಿರಿಯರಲ್ಲಿ ಭಕ್ತಿಇಲ್ಲ, ಪೋಷಕರಿಗೆ ಮಕ್ಕಳು ಬೆಲೆ ಕೊಡ್ತಾಇಲ್ಲ, ಪೋಷಕರು ಮತ್ತು ಮಕ್ಕಳು ಮೊಬೈಲ್‌ದಾಸರಾಗಿದ್ದಾರೆ, ಬಂಧು–ಬಳಗದ ಸಂಪರ್ಕದಿಂದದೂರವಿರುತ್ತಾರೆ, ಪರಿಸ್ಥಿತಿ ಹೀಗೆ ಮುಂದುವರಿದರೆ ಪೋಷಕರುದೊಡ್ಡದುರಂತವನ್ನು ಅನುಭವಿಸುತ್ತಾರೆ, ಈಗಲೇ ಎಚ್ಚೆತ್ತುಕೊಳ್ಳುವುದು ಅವಶ್ಯಕವೆಂದರು. ಸಮಾಜದಲ್ಲಿ ಮಹಿಳೆಯರ ಪಾತ್ರಮುಖ್ಯ.ಆದರೆಇತ್ತೀಚೆಗೆಆಮಿಷಕ್ಕೆಒಳಗಾಗಿ ಪತಿ–ಪತ್ನಿಯರಲ್ಲಿ ಸೌಹಾರ್ದತೆಇಲ್ಲ. ಅತ್ತೆ ಅಜ್ಜಿ, ಅಕ್ಕ–ತಂಗಿಯರು ಹೊಣೆಗಾರಿಕೆಯನ್ನು ಅರಿತುಕೊಳ್ಳಬೇಕೆಂದರು. ನಮ್ಮದೇಶದ ಸಂಸ್ಕೃತಿ ದಿನದಿಂದ ದಿನಕ್ಕೆ ಕುಸಿಯುತ್ತಿದೆ ಜನನೀಯರು ಮನೆಗೆ ಮೊದಲ ಗುರುವಾಗಿ ಮಕ್ಕಳಿಗೆ ಸಂಸ್ಕಾರದ ಬೀಜ ಬಿತ್ತುವುದರ ಮೂಲಕ ಒಳ್ಳೆಯ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕು ಎಂದು ನಿವೃತ್ತಗ್ರಂಥ ಪಾಲಕಿ ಶ್ರೀಮತಿ ನಾಗರತ್ನ ಹೊಸಮನಿಯವರುಕರೆ ನೀಡಿದರು. ಮಹಿಳೆಯರು ಮೊಬೈಲ್ ಬಿಟ್ಟುಓದುವಛಲ ವನ್ನು ಬೆಳೆಸಿಕೊಳ್ಳಬೇಕು, ಮನೆ ಕೆಲಸದಕಾಂ ರುಕತ್ವದಲ್ಲಿತೊಡಗಿದೇಶದ ಮತ್ತುಕುಟುಂಬದ ಶಾಂತತೆಯನ್ನುಕಾಪಾಡಬೇಕೆಂದು ನಿವೃತ್ತ ಶಿಕ್ಷಕಿ ಶ್ರೀಮತಿ ಸುನಂದಜಂಬನ ಗೌಡ್ರು ನುಡಿದರು.

12ನೇ ಶತಮಾನದಲ್ಲಿ ಬಸವಣ್ಣನವರು ಸಂವಿಧಾನ ರೂಪಿಸಿದವರು. ಅವರ ವಚನಗಳನ್ನು ಅರಗಿಸಿಕೊಳ್ಳುವುದು ಬಹಳ ಕಷ್ಟ. ಮಹಾತ್ಮರನ್ನು ನೆನೆಯುವುದರಿಂದಜೀವನ ಸುಂದರ ಸುಖಮಯವಾಗಿರುತ್ತದೆ, ಬಿದ್ದವರನ್ನು ಮೇಲೆತ್ತುವುದು ಬಸವಣ್ಣನವರಕಾಯಕವಾಗಿತ್ತು ಎಂದು ಸೋಮಸಮುದ್ರದ ಶ್ರೀ ಕೊಟ್ಟೂರು ಸ್ವಾಮಿ ಮಠದ ಶ್ರೀ ಸಿದ್ಧಲಿಂಗ ದೇವರು ಆಶೀರ್ವಚನದಲ್ಲಿ ನುಡಿದರು. ಅಕ್ಕನ ಬಳಗದ ಅಧ್ಯಕ್ಷ ಶ್ರೀಮತಿ ಮಂಗಳ ವೀರಪ್ಪ ಭಾವಿ ಅಧ್ಯಕ್ಷತೆ ವಹಿಸಿದ್ದರು. ಆರಂಭದಲ್ಲಿ ಶ್ರೀ ಪಂಚಾಕ್ಷರಿ ಸಂಗೀತ ವಿದ್ಯಾಲಯದ ಟಿ. ಹೆಚ್. ಎಂ. ಶಿವಕುಮಾರ ಸ್ವಾಮಿ ಪ್ರಾರ್ಥಿಸಿದರು. ನಂತರ ನಿವೃತ್ತ ಶಿಕ್ಷಕ ಮಹಾ ರುದ್ರಪ್ಪ ಮೆಣಸಿನಕಾಯಿ ಯವರು ಸ್ವಾಗತಿಸಿದರು. ಶ್ರೀ ಸಿದ್ದಗಂಗಾ ವಿದ್ಯಾಸಂಸ್ಥೆಯ ಸಹ ಶಿಕ್ಷಕಿ ಶ್ರೀಮತಿ ತನುಜ ವಿ.ಬಿ. ಕಾರ್ಯಕ್ರಮ ನಿರೂಪಿಸಿದರು.



---

**ಚಳ್ಳಕೆರೆ ತಾಲ್ಲೂಕಿನಾದ್ಯಂತ ನೂತನವಾಗಿ 45 ಕಂದಾಯ, 5 ಉಪಕಂದಾಯ ಗ್ರಾಮ ಗುರುತು**

# ಸರ್ವೆ ನಂತರ ಸೌಲಭ್ಯ: ಎಸಿ



» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಸರ್ಕಾರಿ ಗೋಮಾಳ ಹಾಗೂ ಖಾಸಗಿ ಜಮೀನುಗಳಲ್ಲಿ ಕಳೆದ ಹತ್ತು ವರ್ಷಗಳಿಂದ ತಾತ್ಕಾಲಿಕವಾಗಿ ಮನೆ ನಿರ್ಮಿಸಿಕೊಂಡು ಕಡೆ ಪಕ್ಷ 50 ಕುಟುಂಬಗಳು ವಾಸವಿದ್ದರೆ ಅಂತಹ ಪ್ರವೇಶವನ್ನು ಕಂದಾಯ ಗ್ರಾಮವೆಂದು ಗುರುತಿಸಿ, ಸರ್ವೆ ನಡೆಸಿ ಅವರಿಗೆ ಹಕ್ಕುಪತ್ರ, ಇನ್ನಿತರೆ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ತಿಳಿಸಿದರು.

ಅವರು, ಗುರುವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹತ್ತಾರು ಹಟ್ಟಿಯ ನೂರಾರು ಜನರು ತಾಲ್ಲೂಕು ಕಚೇರಿಗೆ ಆಗಮಿಸಿ ಕಂದಾಯ ಗ್ರಾಮ ಮಾಡುವ ವಿಚಾರದಲ್ಲಿ ಚರ್ಚೆ ನಡೆಸುವ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಸರ್ಕಾರದ ನಿಯಮಗಳ ಬಗ್ಗೆ ಮಾಹಿತಿ ನೀಡಿದರು. 50 ಕುಟುಂಬಗಳಿಗಿಂತ ಕಡಿಮೆ ಜನಸಂಖ್ಯೆ ಇದ್ದಲ್ಲಿ ಉಪಗ್ರಾಮಗಳನ್ನಾಗಿ ಗುರುತಿಸಲಾಗುವುದು. ಈ ಪ್ರಕ್ರಿಯೆ ಕಳೆದ ಕೆಲವು ವರ್ಷಗಳಿಂದ ನಡೆಯುತ್ತಾ ಬಂದಿದ್ದು, ತಾಲ್ಲೂಕಿನಲ್ಲಿ ಈಗಾಗಲೇ 45 ಕಂದಾಯ ಗ್ರಾಮ, 5 ಉಪಕಂದಾಯ ಗ್ರಾಮಗಳನ್ನು ಗುರುತಿಸಲಾಗಿದೆ ಎಂದರು. ತಹಶೀಲ್ದಾರ್ ರೇಹಾನ್‌ಪಾಷ ಮಾಹಿತಿ ನೀಡಿದರು. ಶಿರಸ್ಥೇದಾರ್ ಸದಾಶಿವಪ್ಪ, ಮಂಜುನಾಥ, ಕಂದಾಯಾಧಿಕಾರಿ ಲಿಂಗೇಗೌಡ, ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

---

**ಪ್ರಮುಖ ಸುದ್ದಿ**

# ಮಾನಸಿಕ ರೋಗಿಗಳನ್ನು ಸಹಾನುಭೂತಿಯಿಂದ ಕಾಣಬೇಕು

» **ಚಿತ್ರದುರ್ಗ**

ಸಂಶೋಧನೆಗಳ ಪ್ರಕಾರ ದೇಶದಲ್ಲಿ ನೂರಕ್ಕೆ ಶೇ.13.4 ರಷ್ಟು ಜನರು ಮಾನಸಿಕ ಖಾಯಿಲೆಗಳಿಂದ ಬಳಲುತ್ತಿದ್ದಾರೆ. ಸ್ಕಿಜೋಫ್ರೇನಿಯಾ ಶೇ.1 ರಷ್ಟು ಜನರಲ್ಲಿ ಕಂಡುಬಂದಿದೆ. ಮಾನಸಿಕ ಖಾಯಿಲೆಗಳನ್ನು ಸಹ ಸಂಪೂರ್ಣವಾಗಿ ಗುಣ ಪಡಿಸಬಹುದಾಗಿದೆ. ಮಾನಸಿಕ ರೋಗಿಗಳನ್ನು ಪ್ರೀತಿ ಹಾಗೂ ಸಹಾನುಭೂತಿಯಿಂದ ಕಾಣಬೇಕು ಎಂದು ಮನೋವೈದ್ಯ ಡಾ.ಆರ್.ಮಂಜುನಾಥ ಹೇಳಿದರು.

ನಗರದ ಶ್ರೀ.ಕಬೀರಾನಂದ ವಿದ್ಯಾಸಂಸ್ಥೆಯಲ್ಲಿ ಗುರುವಾರ ಆಯೋಜಿಸಲಾಗಿದ್ದ ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸ್ಕಿಜೋಫ್ರೇನಿಯಾ ಎನ್ನುವುದು ತೀವ್ರತರವಾದ ಮಾನಸಿಕ ಕಾಯಿಲೆಯಾಗಿದೆ. ಇದರಲ್ಲಿ ರೋಗಿಯು ನೈಜ ಜಗತ್ತಿನ ಜೊತೆಗೆ ಸಂಪರ್ಕದಲ್ಲಿ ಇರುವುದಿಲ್ಲ. ಯೋಚನೆ ಮಾಡುವ ರೀತಿ, ಮಾತನಾಡುವ ರೀತಿಯಲ್ಲಿ ವ್ಯತ್ಯಾಸ ಕಂಡುಬುರತ್ತದೆ. ಸ್ಕಿಜೋಪ್ರೇನಿಯಾದಿಂದ ಬಳಲುವವರು ದೈನಂದಿನ ಕಾರ್ಯ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸುವಲ್ಲಿ ವಿಫಲರಾಗುತ್ತಾರೆ. ಸ್ಕಿಜೋಫ್ರೇನಿಯಾ ಕಾಯಿಲೆಗೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾದ ಚಿಕಿತ್ಸೆ ದೊರೆಯುತ್ತದೆ. ಉತ್ತಮ ಸಮಾಲೋಚನೆ ಮೂಲಕ ಸಂಪೂರ್ಣವಾಗಿ ಗುಣಮುಖರಾಗಬಹುದು. ನಂತರ ಸಾಮಾನ್ಯರಂತೆ ಜೀವಿಸಬಹುದು. ಈ ಕಾಯಿಲೆ ಇರುವ ವ್ಯಕ್ತಿಗಳನ್ನು ಸಮಾಜದಲ್ಲಿ ಕಳಂಕ ಮತ್ತು ತಾರತಮ್ಯದಿಂದ ಕಾಣಬಾರದು. ಇವರ ಬಗ್ಗೆ ಹೆಚ್ಚಿನ ಸಹಾನೂಭೂತಿ ತೋರಬೇಕು. ಇವರನ್ನು ಮಾನಸಿಕವಾಗಿ ಸದೃಢರನ್ನಾಗಿ ಮಾಡಬೇಕು.ಸ್ಪ್ಲಿಟ್ ಪರ್ಸನಾಲಿಟಿ ಮತ್ತು ಸ್ಕಿಜೋಫ್ರೇನಿಯಾ ಎರಡು ಕೂಡ ಬೇರೆ ಬೇರೆ. ಮೆದುಳಲ್ಲಿ ರಸಾಯನಿಕ ಬದಲಾವಣೆಗಳಿಂದ ಒಂದು ನಿರ್ದಿಷ್ಟವಾದ ವಯಸ್ಸಿನಲ್ಲಿ ವ್ಯಕ್ತಿಗೆ ಸ್ಕಿಜೋಫ್ರೇನಿಯಾ ಕಾಯಿಲೆ ಶುರುವಾಗುತ್ತದೆ. ವಿಶೇಷವಾಗಿ ಹದಿ ಹರಿಯದವರಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ಅವಳಿ ಜವಳಿ ಮಕ್ಕಳಲ್ಲಿ ಒಂದು ಮಗು ಸ್ಕಿಜೋಪ್ರೇನಿಯಾಗಿತುತ್ತಾದರೆಇನ್ನೊಂದು ಮಗುವುದ ರೋಗಕ್ಕೆ ಒಳಗಾಗುವ ಸಂಭವ ಇರುತ್ತದೆ. ಸರ್ಕಾರದಿಂದ ಮಾನಸಿಕ ಖಾಯಿಲೆಯಿಂದ ಬಳಲುವವರಿಗಾಗಿ ಟೆಲಿ ಮಾನಸ ಉಚಿತ ಸಹಾಯವಾಣಿ ಸಂಖ್ಯೆ 14416 ಆರಂಭಿಸಲಾಗಿದೆ. ಈ ಸಂಖ್ಯೆಗೆ ಕರೆ ಮಾಡಿ ಆಪ್ತಸಮಾಲೋಚನೆ ಪಡೆಯಬಹುದು ಎಂದು ಡಾ.ಆರ್. ಮಂಜುನಾಥ ಹೇಳಿದರು.ಶ್ರೀ ಸದ್ಗುರು ಕಬೀರಾನಂದ ಆಶ್ರಮದ ಶಿವಲಿಂಗಾನಂದ ಮಹಾಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ, ಆದಿ ಋಷಿಗಳು ಹೇಳಿದಂತೆ ಮನಸ್ಸೆ ದೇಹದಲ್ಲಿ ಅತಿ ಮುಖ್ಯವಾದ ಭಾಗ, ತಾಯಿಬೇರಿನಂತೆ ಮನಸ್ಸು ಎಲ್ಲದಕ್ಕೂ ಮೂಲ. ಮನ್ಸು ಹುಟ್ಟಿದ್ದು ಅರ್ಧ ಗಾಳಿ ಇನ್ನರ್ಧ ಆಕಾಶ, ಆಕಾಶ ಗಾಳಿ ಸೇರಿ ಮನಸ್ಸು ಸೃಷ್ಟಿಯಾಗಿದೆ. ವಾಯುವಿನಂತೆ ಮನಸ್ಸು ಸಂಚರಿಸುತ್ತದೆ, ಆದರಿಂದ ಮನಸ್ಸು ಚಂಚಲವಾಗಿರುತ್ತದೆ, ಕಣ್ಣಿಗೆ ಕಾಣದ ಮನಸ್ಸು. ಮಾನಸಿಕವಾದಂತಹ ವಸ್ತುಗಳುಸಿಗಲ್ಲಮಾನಸಿಕಕಾಯಿಲೆಯಿಂದ ಬಳಲುವವರು ಬಹಳಷ್ಟು ಜನರಿದ್ದಾರೆ. ಮಾನಸಿಕ ಕಾಯಿಲೆಯ ಪರಿಹಾರಕ್ಕೆ ಅನೇಕ ಚಿಕಿತ್ಸೆಗಳಿವೆ ಎಂದು ಹೇಳಿದರು.

ಜಿಲ್ಲಾಮಾನಸಿಕಆರೋಗ್ಯಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ನಾಗರಾಜ್.ಜಿ.ಓ ಪ್ರಾಸ್ತವಿಕವಾಗಿ ಮಾತನಾಡಿ, ಸ್ಕಿಜೋಫ್ರೇನಿಯಾ ಎನ್ನುವುದನ್ನು ಕನ್ನಡದಲ್ಲಿ ಚಿತ್ತ ಚಂಚಲತೆ ಅಥವಾ ಚಿತ್ತ ವಿಕಲತೆ ಎಂದು ಕರೆಯುತ್ತೇವೆ. ಕಾಯಿಲೆ ಇರುವ ವ್ಯಕ್ತಿಗೆ ಕಾಯಿಲೆಯ ಬಗ್ಗೆ ಅರಿವು ಇರುವುದಿಲ್ಲ, ಭ್ರಮೆ ಮತ್ತು ಭ್ರಾಂತಿಗಳು ಇರುತ್ತವೆ. ಯಾರಿಗೂ ಕಾಣದ ವಸ್ತುಗಳು ದೃಶ್ಯವನ್ನು ಕಾಣುವುದು, ಯಾರಿಗೂ ಕೇಳಿಸದ ಧ್ವನಿಗಳು ಕೇಳುವುದು, ಅನುಮಾನ ಅಥವಾ ಯತ್ತೇಚ್ಚವಾಗಿ ಸಂಶಯಪಡುವುದು, ವಿಚಿತ್ರವಾಗಿ ವರ್ತಿಸುವುದು ಮುಂತಾದ ಲಕ್ಷಣಗಳು ಕಂಡುಬರುತ್ತವೆ. ಈ ರೀತಿಯ ಕಾಯಿಲೆ ಇರುವವರನ್ನು ಪ್ರೀತಿಯಿಂದ ಕಾಣಬೇಕು ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್.ಡಿ.ಎಂ, ತಾಲೂಕು ಆರೋಗ್ಯ ಅಧಿಕಾರಿ ಡಾ.ಗಿರೀಶ್.ಬಿ.ವಿ, ಕಬೀರಾನಂದ ಡಿಪಿಇಡಿ ಕಾಲೇಜಿನ ಪ್ರಾಂಶುಪಾಲನಿರಂಜನಮೂರ್ತಿ.ಸಿ.ಎಲ್, ಬಿ.ಇಡಿ ಪ್ರಾಂಶುಪಾಲ ಗಿರೀಶ್.ಟಿ, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲೆ ವಿಶಾಲ.ಎಸ್ ಭಾಗವಹಿಸಿದ್ದರು. ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಕಾರ್ಯಕ್ರಮದ ನಿರೂಪಣೆ ಮತ್ತು ವಂದನಾರ್ಪಣೆ ಮಾಡಿದರು. ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಚಿಕಿತ್ಸಕ ಮನೊವೈದ್ಯ ಶ್ರೀಧರ.ಟಿ, ಸಾಮಾಜಿಕ ಮಾನಸಿಕ ಕಾರ್ಯಕರ್ತೆ ಸುನೀತಾ.ಎನ್, ಶುಶ್ರೂಷಕಿ ರಶ್ಮಿ.ಕೆ.ಎಂ, ರೂಪ.ಆರ್,ಅರುಣ ಕೀರ್ತಿ, ಶಿವರಾಜ್ .ಟಿ, ಮಂಜುನಾಥ.ಟಿ ಮತ್ತು ಮಂಜುನಾಥ್.ಎಂ.ಓ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



ಫಾಸ್ಟ್ ನ್ಯೂಸ್

## ಕಾನೂನು ಬಾಹಿರವಾಗಿ ದತ್ತು ಪಡೆದವರ ವಿರುದ್ಧ ಎಫ್.ಐ.ಆರ್ ದಾಖಲಿಸಿ

» ದಾವಣಗೆರೆ

ದಾವಣಗೆರೆ ತಾಲ್ಲೂಕು ದೊಡ್ಡಬಾತಿ ಗ್ರಾಮದ ದಾಸಪ್ಪರ ರಾಜಪ್ಪ ಇವರ ಪತ್ನಿ ಮಂಜುಳ ದಾಸಪ್ಪರ ರಾಜಪ್ಪ ಇವರು ಅನಧಿಕೃತವಾಗಿ ಸುಮಾರು 4 ತಿಂಗಳ ಹೆಣ್ಣು ಮಗುವನ್ನು ತಮ್ಮ ಮನೆಯಲ್ಲಿ ಇಟ್ಟುಕೊಂಡು ಸಾಕುತ್ತಿರುವ ಬಗ್ಗೆ ಮಕ್ಕಳ ಸಹಾಯವಾಣಿ-1098 ಕ್ಕೆ ಬಂದ ದೂರವಾಣಿ ಕರೆಯನ್ವಯ ಮೇ.24 ರಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳಾದ ಮಕ್ಕಳ ರಕ್ಷಣಾಧಿಕಾರಿಗಳಾದ (ಸಾಂಸ್ಥಿಕ),ಶ್ರೀಮತಿ ಪ್ರತಿಭಾ ಎಂ.ಹೆಚ್ ಶ್ರೀ ಚಂದ್ರಶೇಖರ್ ಎನ್.ಕೆ (ಸಾಂಸ್ಥಿಕೇತರ) ಹಾಗೂ ಆಪ್ತ ಸಮಾಲೋಚಕರಾದ ಶ್ರೀಮತಿ ಶ್ವೇತಾ ಐ.ಎಂ ಇವರನ್ನು ಸ್ಥಳಕ್ಕೆ ಭೇಟಿ ನೀಡಿದಾಗ ಶ್ರೀಮತಿ ಮಂಜುಳಾ ಕೋಂ ದಾಸಪ್ಪರ ರಾಜಪ್ಪ ಇವರು ಹಾಜರಿದ್ದು, ಅವರ ಜೊತೆ ಸುಮಾರು 4 ತಿಂಗಳ ಹೆಣ್ಣು ನವಜಾತ ಶಿಶು ಇದ್ದು, ಮಗುವಿನ ಬಗ್ಗೆ ಮಾಹಿತಿ ಕೇಳಿದಾಗ ಈ ಮಗು ನನಗೆ ಪರಿಚಯ ಇರುವ ಶ್ರೀಮತಿ ಕುಸುಮಾ ವಯಸ್ಸು ಸುಮಾರು-30 ವರ್ಷ, ತಳವಾರ ಓಣಿ, ಬಾಲೇ ಹೊಸೂರು ಗ್ರಾಮ, ಲಕ್ಷ್ಮೇಶ್ವರ ತಾ॥ ಗದಗ ಜಿಲ್ಲೆ ಇವರಿಗೆ ಹಾವೇರಿ ಜಿಲ್ಲೆ ಬ್ಯಾಡಗಿಯ ವೈದ್ಯರಾದ ಶ್ರೀಮತಿ ಚೈತುನಬಿ ಮ, ಸೌದಾಗರ(ಪಾರಂಪರಿಕ ಹಾಗೂ ತರಬೇತಿ ಹೊಂದಿದ ದಾಯಿ) ಇವರ ಮನೆಯಲ್ಲಿ ಹೆರಿಗೆ ಆಗಿದ್ದು, ಇವರಿಂದ ನಾವು ಪಡೆದುಕೊಂಡು ನಾವೇ ತಂದೆ- ತಾಯಿ ಎಂದು ಪುರಸಭೆ ಕಾರ್ಯಾಲಯ, ಬ್ಯಾಡಗಿ, ಹಾವೇರಿ ಜಿಲ್ಲಿ ಇವರಲ್ಲಿ ಜನನ ಪ್ರಮಾಣ ಪತ್ರವನ್ನು ಸಹ ಪಡೆದಿರುತ್ತೇವೆಂದು ತಿಳಿಸಿದ್ದಾರೆ.

ಈ ಖಚಿತ ಮಾಹಿತಿ ಮೇರೆಗೆ ಬಾಲನ್ಯಾಯ ಕಾಯ್ದೆ-2015 ರಡಿಯಲ್ಲಿ ಈ ಮಗುವನ್ನು ಅನಧಿಕೃತವಾಗಿ ಪಡೆದುಕೊಂಡು ಜನನ ಪ್ರಮಾಣ ಪತ್ರವನ್ನು ಸಹ ಸುಳ್ಳು ದಾಖಲಾತಿ ಮುಖಾಂತರ ಸೃಷ್ಟಿಸಿಕೊಂಡಿರುವುದು ಕಾನೂನು ಉಲ್ಲಂಘನೆಯಾಗಿರುತ್ತದೆ. ಆದುದರಿಂದ ಮಗುವನ್ನು ನೀಡಿದವರು, ಪಡೆದವರು ಮತ್ತು ಜನನ ಪ್ರಮಾಣ ಪತ್ರ ಸೃಷ್ಟಿಸಲು ಸಹಕಾರ ನೀಡಿದ ಎಲ್ಲಾರ ವಿರುದ್ಧ ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಿ ಕ್ರಮ ಕೈಗೊಳ್ಳಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಿಕಿ ಶ್ರೀಮತಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ ಟಿ.ಎನ್, ಇವರು ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಿ ಕ್ರಮ ತೆಗೆದುಕೊಳ್ಳಲು ತಿಳಿಸಿರುತ್ತಾರೆ.

## ವಿಧಾನ ಪರಿಷತ್ ಚುನಾವಣೆ, ಮತದಾರರಿಗೆ ವಿಶೇಷ ಸಾಂದರ್ಭಿಕ ರಜೆ

» ದಾವಣಗೆರೆ

ವಿಧಾನ ಪರಿಷತ್‌ನ ಆಗ್ನೇಯ ಶಿಕ್ಷಕರ ಕ್ಷೇತ್ರ ಹಾಗೂ ನೈರುತ್ಯ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಜೂನ್ 3 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಮತದಾರರಾಗಿರುವ ಶಿಕ್ಷಕರಿಗೆ ಹಾಗೂ ಪದವೀಧರರಿಗೆ ಮತದಾನ ಮಾಡಲು ವಿಶೇಷ ಸಾಂದರ್ಭಿಕ ರಜೆಯನ್ನು ನೀಡಲಾಗಿರುತ್ತದೆ. ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಚೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆಗಳು ಉಳಿದ ಕೈಗಾರಿಕೆ ಸಂಸ್ಥೆಗಳು ಹಾಗೂ ಸಹಕಾರ ರಂಗದ ಸಂಘ ಸಂಸ್ಥೆಗಳಲ್ಲಿ ಎಲ್ಲಾ ವ್ಯವಹಾರಿಕ ಸಂಸ್ಥೆಗಳಲ್ಲಿ ಔದ್ಯಮಿಕ ಸಂಸ್ಥೆಗಳಲ್ಲಿ ಮತ್ತು ಇತರ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಅಂತಹ ಅರ್ಹ ಮತದಾರರಿಗೆ ಸೀಮಿತವಾದಂತೆ ಚಲಾಯಿಸಲಿರುವ ಮತದಾರರಿಗೆ ಮತದಾನದ ದಿನವಾದ ಜೂನ್ 3 ರ ಸೋಮವಾರದಂದು ವಿಶೇಷ ಸಾಂದರ್ಭಿಕ ರಜೆ ಯನ್ನು ಮಂಜೂರು ಮಾಡಲು ಆದೇಶಿಸಲಾಗಿದೆ. ಮತದಾನ ಮಾಡುವ ಸಮಯದಲ್ಲಿ ಮತದಾರರನ್ನು ಗುರುತಿಸಲು ಮತದಾರರ ಭಾವಚಿತ್ರವುಳ್ಳ ಗುರುತಿನ ಚೀಟಿ ಮುಖ್ಯ ದಾಖಲಾತಿಯಾಗಿ ಹಾಜರು ಪಡಿಸಬೇಕು. ಮತದಾರರ ಪಟ್ಟಿಯಲ್ಲಿ ಹೆಸರಿದ್ದವರು ಗುರುತಿನ ಚೀಟಿ ಹೊಂದಿಲ್ಲದಿದ್ದಲ್ಲಿ ಅಂತಹವರು ಭಾರತ ಚುನಾವಣಾ ಆಯೋಗವು ನಿರ್ಧರಿಸಿರುವ ಪೂರಕ ದಾಖಲಾತಿಗಳ ಪೈಕಿ ಒಂದನ್ನು ಹಾಜರುಪಡಿಸಿ ಮತದಾನ ಮಾಡಲು ಅವಕಾಶವಿರುತ್ತದೆ.

**ಪೂರಕ ದಾಖಲಾತಿ:** ಆಧಾರ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ಪಾನ್‌ಕಾರ್ಡ್, ಇಂಡಿಯಾನ್ ಪಾಸ್ ಪೋರ್ಟ್, ಕೇಂದ್ರ, ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳು ಅಥವಾ ಇತರ ಖಾಸಗಿ ಕೈಗಾರಿಕಾ ಮನೆಗಳಿಂದ ಅದರ ಉದ್ಯೋಗಿಗಳಿಗೆ ನೀಡಲಾದ ಸೇವಾ ಗುರುತಿನ ಕಾರ್ಡ್, ಸಂಸದರು, ಶಾಸಕರು, ಎಂಎಲ್‌ಸಿಗಳಿಗೆ ಅಧಿಕೃತ ಗುರುತಿನ ಚೀಟಿ, ಶಿಕ್ಷಣ ಸಂಸ್ಥೆಗಳಿಂದ ನೀಡಲಾದ ಸೇವಾ ಗುರುತಿನ ಕಾರ್ಡ್‌ಗಳು, ಇದರಲ್ಲಿ ಶಿಕ್ಷಕರು, ಪದವೀಧರರ ಕ್ಷೇತ್ರದ ಮತದಾರರನ್ನು ನೇಮಿಸಿಕೊಳ್ಳಬಹುದು, ವಿಶ್ವವಿದ್ಯಾಲಯವು ನೀಡಿದ ಪದವಿ, ಡಿಪ್ಲೋಮಾ ಮೂಲ ಪ್ರಮಾಣ ಪತ್ರ, ಸಕ್ಷಮ ಪ್ರಾಧಿಕಾರದಿಂದ ನೀಡಿದ ದೈಹಿಕನ್ಯೂನತೆಯ ಪ್ರಮಾಣ ಪತ್ರ, ವಿಶಿಷ್ಟ ಅಂಗವೈಕಲ್ಯ ಕಾರ್ಡ್(UDID) ಮೂಲಕ ಮತದಾನ ಮಾಡಬಹುದು ಎಂದು ತಿಳಿಸಿದ್ದಾರೆ.

# ನನ್ನ ಕೈಹಿಡಿಯಲಿವೆ ಅಭಿವೃದ್ಧಿ ಕಾರ್ಯಗಳು

» ಚಿತ್ರದುರ್ಗ

ಕಳೆದ ಮೂರು ಬಾರಿ ವಿಧಾನಪರಿಷತ್ ಸದಸ್ಯರಾಗಿ ಶಿಕ್ಷಕರಿಗಾಗಿ ಮಾಡಿದ ಹೋರಾಟಗಳು, ಶಿಕ್ಷಣ ಕ್ಷೇತ್ರದಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳು, ಕಾರ್ಯಾದೇಶಗಳು, ಪರಿಹಾರಗಳು ನನ್ನ ಈ ಚುನಾವಣೆಯಲ್ಲಿ ಶ್ರೀರಕ್ಷೆಯಾಗಲಿದೆ, ಇವು ನನ್ನನ್ನು ಕೈ ಹಿಡಿಯಲಿವೆ ಎಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ಎನ್‌ಡಿಎ ಮೈತ್ರಿ ಕೂಟದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ತಿಳಿಸಿದರು.



ನಗರದ ಬಾಲಕಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮತಯಾಚನೆ ಮಾಡಿ ಮಾತನಾಡಿದ ಅವರು, ಕಳೆದ ಮೂರು ಬಾರಿ ವಿಧಾನ ಪರಿಷತ್ ಸದಸ್ಯನಾಗಿ ಶಿಕ್ಷಕರ ಪರವಾಗಿ ಹಲವಾರು ಕೆಲಸವನ್ನು ಮಾಡಿದ್ದೇನೆ ಎಂದರು.

ಇವರ ಪರವಾಗಿ ಸದನದ ಒಳಗೂ ಹೊರಗೂ ಹೋರಾಟವನ್ನು ಮಾಡಿದ್ದೇನೆ, ಕಳೆದ ಮೂರು ಬಾರಿ ನಾನು ಬಿಜೆಪಿ ಅಭ್ಯರ್ಥಿಯಾಗಿದ್ದೆ ಆದರೆ ಈ ಬಾರಿ ನಾನು ಬಿಜೆಪಿ ಜೆಡಿಎಸ್‌ನ ಮೈತ್ರಿ ಕೂಟದ ಅಭ್ಯರ್ತಿಯಾಗಿದ್ದೇನೆ. ಈ ಹಿನ್ನಲೆಯಲ್ಲಿ ನಮ್ಮ ಬಲ ಹೆಚ್ಚಾಗಿದೆ. ನನ್ನ ಪರವಾದ ಒಲವು ಹೆಚ್ಚಾಗಿದೆ, ಈ ಬಾರಿ ಶಿಕ್ಷಕರು ಮತ್ತು ಉಪನ್ಯಾಸಕರ ಬಂಧುಗಳು ನನ್ನನ್ನು ಗೆಲ್ಲಿಸಲು ಮುಂದಾಗಿದ್ದರು ಸಹಾ ಮತದಾರರು ನನ್ನ ಪರವಾಗಿ ಇದ್ದಾರೆ ಕಾಂಗ್ರೆಸ್ ರವರು ಎಷ್ಟೇ ಕುತಂತ್ರಗಳನ್ನು ಮಾಡಿ ಆಸೆ ಅಮಿಷಗಳನ್ನು ಒಡ್ಡಿದರೂ ಸಹಾ ಮತದಾರರು ನನ್ನ ಕೈ ಬಿಡುವುದಿಲ್ಲ ಗೆಲ್ಲಿಸುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಸರ್ಕಾರ ಬಂದು ಒಂದು ವರ್ಷವಾಯಿತು, ಚುನಾವಣೆಯ ಸಮುಯದಲ್ಲಿ ತಮ್ಮ ಪ್ರನಾಳಿಕೆಯಲ್ಲಿ ಹೇಳಲಾಗಿತ್ತು ನಮ್ಮ ಸರ್ಕಾರ ಬಂದರೆ ಎನ್.ಪಿ.ಎಸ್. ತೆಗೆದು ಹಾಕಿ ಓಪಿಎಸ್‌ನ್ನು ತರುತ್ತೇವೆ ಎಂದು ಹೇಳಲಾಗಿತ್ತು ಜೊತೆಗೆ 7ನೇ ವೇತನ ಆಯೋಗವನ್ನು ಜಾರಿ ಮಾಡುತ್ತೇವೆ ಎಂದು ತಿಳಿಸಲಾಗಿತ್ತು ಆದರೆ ಸರ್ಕಾರ ಬಂದು ಒಂದು ವರ್ಷವಾದರೂ ಸಹಾ ಇದರ ಬಗ್ಗೆ ಯಾವ ಮಾತನ್ನು ಸರ್ಕಾರ ಆಡುತ್ತಿಲ್ಲ. ಸಭೆಯನ್ನು ಸಹಾ ಮಾಡಿಲ್ಲ ಇದರ ಬಗ್ಗೆ ಸುಪ್ರೀಂ ನ್ಯಾಯಾಲಯದ ಸೂಚನೆಯಂತೆ ಮಾಡಲಾಗಿದೆ ಆದರೂ ತಮ್ಮ ಪ್ರಣಾಳಿಕೆಯಂತೆ ಏನನ್ನು ಸಹಾ ಮಾಡಿಲ್ಲ ಎಂದರು.

ಬಿಜೆಪಿ ಸರ್ಕಾರ ಇದ್ದಾಗ ಸರ್ಕಾರಿ ನೌಕರರಿಗೆ ಶೇ.17ರಷ್ಟು ಮಧ್ಯಾಂತರ ಪರಿಹಾರವನ್ನು ನೀಡಲಾಗಿತ್ತು ಬಿಟ್ಟರೆ 7 ನೇ ವೇತನ ಜಾರಿಯ ಮಾತನ್ನು ಸರ್ಕಾರ ಆಡಿಲ್ಲ,

ಇದರ ಬಗ್ಗೆ ಸರ್ಕಾರ ಸಭೆಯನ್ನು ಮಾಡಿ ಇದರ ಬಗ್ಗೆ ವಿಧಾನ ಸಭೆಯಲ್ಲಿ ಹೋರಾಟವನ್ನು ಮಾಡಿದಾಗ ಸರ್ಕಾರ ಇದರ ಬಗ್ಗೆ ಭರವಸೆಯನ್ನು ನೀಡಿದ್ದಾರೆ ಈ ಹಿನ್ನಲೆಯಲ್ಲಿ ಶಿಕ್ಷಕ ಸಮುದಾಯಕ್ಕೆ ಕಾಂಗ್ರೆಸ್ ಸರ್ಕಾರದ ಮೇಲೆ ಭರವಸೆ ಉಳಿದಿಲ್ಲ ಎಂದು ತಿಳಿಸಿದರು.

ಕಾಂಗ್ರೆಸ್ ಅಭ್ಯರ್ಥಿಗಳು ನಮ್ಮ ಮೇಲೆ ಆರೋಪವನ್ನು ಮಾಡುತ್ತಿದ್ದಾರೆ, 18 ವರ್ಷ ಸದಸ್ಯರಾಗಿ ಏನು ಮಾಡಿಲ್ಲ ಎಂದು ನನ್ನ 18 ವರ್ಷದ ಸಾಧನೆಗಳ ಬಗ್ಗೆ ಪತ್ರಿಕೆಯನ್ನು ಹೊರ ತಂದಿದ್ದೇನೆ ಅದನ್ನು ಅವರು ಓದಿಕೊಂಡು ಮುಂದಿನ ಸಾರಿ ಮಾತನಾಡುವಾಗ ಎಚ್ಚರದಿಂದ ಮಾತನಾಡಲಿ ಎಂದು ಟಾಂಗ್ ನೀಡಿದ ನಾರಾಯಣಸ್ವಾಮಿ, ಸರ್ಕಾರ ಇದೆ ಎಂದು ಗಾಳಿಯಲ್ಲಿ ಗುಂಡು ಹಾರಿಸು ಕಾರ್ಯವನ್ನು ಮಾಡಬೇಡಿ ಅಧಿಕಾರಿಗಳನ್ನು ಬೆದರಿಸಿ ಶಿಕ್ಷಕರ ಮೇಲೆ ಒತ್ತಡವನ್ನು ತಂದು ಮತವನ್ನು ಹಾಕಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಇದು ಖಂಡನೀಯ ಇದರ ಬಗ್ಗೆ ನನಗೆ ಮಾಹಿತಿ ಈ ರೀತಿ ಮಾಡಿದರೆ ಸರಿಯಾಗಿರುವುದಿಲ್ಲ ಮತದಾರರಿಗೆ ಮುಕ್ತವಾದ ಅವಕಾಶವನ್ನು ನೀಡಬೇಕು ಅವರು ಯಾರನ್ನು ಬೇಕಾದರೂ ಆಯ್ಕೆ ಮಾಡಿಕೊಳ್ಳಲ್ಲಿ ಎಂದು ಕಿವಿಮಾತು ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿಗಳು ಸರ್ಕಾರದ ಅಧಿಕಾರಿಗಳನ್ನು ಒಳಕೆ ಮಾಡಿಕೊಂಡು ನಮ್ಮ ಪರವಾದ ಶಿಕ್ಷಕರನ್ನು ಹೆದರಿಸುವ ಕಾರ್ಯವನ್ನು ಮಾಡುತ್ತಿದ್ದಾರೆ ಇದು ಸರಿಯಲ್ಲ ಈ ರೀತಿಯಾದ ಬೆದರಿಕೆಗೆ ಬಗ್ಗುವುದಿಲ್ಲ, ಮತದಾರರನ್ನು ಮನವಿ ಮಾಡೋಣ ಒಳ್ಳೆಯ ರೀತಿಯಲ್ಲಿ ಚುನಾವಣೆಯನ್ನು ಮಾಡೋಣ 18 ವರ್ಷ ನಿಮ್ಮ ಕೆಲಸವನ್ನು ಮಾಡಿದ್ದೇನೆ ಈಗ ಕೂಲಿಯನ್ನು ಕೊಡಿ ಎಂದು ಕೇಳುತ್ತಿದ್ದೇನೆ ಉತ್ತಮ ರೀತಿಯಲ್ಲಿ ಚುನಾವಣೆಯನ್ನು ಮಾಡೋಣ ಎಂದು ಮತದಾರರಲ್ಲಿ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯರಾದ ಹನುಮಂತ ನಿರಾಣಿ ಮಾತನಾಡಿ, ವೈ.ಎ.ನಾರಾಯಣಸ್ವಾಮಿಯವರು ಕಳೆದ ಮೂರು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಶಿಕ್ಷಕರ ಸಮಸ್ಯೆಗಳ ಬಗ್ಗೆ ಸದನದ ಒಳಗೂ ಮತ್ತು ಹೊರಗೂ ಸಹಾ ಹೋರಾಟವನ್ನು ಮಾಡಿದ್ದಾರೆ, ಈ ಬಾರಿ ಅವರನ್ನು ಗೆಲ್ಲಿಸಿದರೆ ಸದನದಲ್ಲಿ ಹಿರಿಯ ಸದಸ್ಯರಾಗಿ ನಿಮ್ಮ ಬೇಡಿಕೆಗಳನ್ನು ಈಡೇರಿಸುವಲ್ಲಿ ಶ್ರಮವಹಿಸುತ್ತಾರೆ ಎಂದು ಭರವಸೆ ನೀಡಿದರು.

ಮೂರು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ನಾರಾಯಣಸ್ವಾಮಿಯವರು ಶಿಕ್ಷಕರ ಬಗ್ಗೆ ಅದರಲ್ಲೂ ಅನುದಾನ ರಹಿತ ಖಾಸಗಿ ಶಾಲೆಗಳ ಶಿಕ್ಷಕರ ಬಗೆಗ ಅಪಾರವಾದ ಕಾಳಜಿಯನ್ನು ಇಟ್ಟುಕೊಂಡು ಅವರ ಪರವಾಗಿ ಕೆಲಸವನ್ನು ಮಾಡಿದ್ದಾರೆ. ಇದರೊಂದಿಗೆ ಖಾಸಗಿ ಶಾಲೆಗಳ ಸಮಸ್ಯೆಯ ಬಗ್ಗೆ ಅರಿವು ಇದ್ದು ಅವುಗಳನ್ನು ಸರ್ಕಾರದೊಂದಿಗೆ ಚರ್ಚೆ ನಡೆಸಿ ಪರಿಹಾರವನ್ನು ಕಂಡುಕೊಂಡಿದ್ದಾರೆ ಎಂದರು.

ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಮಾತನಾಡಿ, ನಾರಾಯಣಸ್ವಾಮಿಯವರು ವಿಧಾನಪರಿಷತ್‌ನಲ್ಲಿ ಶಿಕ್ಷಕರ ಧ್ವನಿಯಾಗಿ ಕೆಲಸವನ್ನು ಮಾಡಿದ್ದಾರೆ. ಮುಂದೆಯೂ ಸಹಾ ಮಾಡಲಿದ್ದಾರೆ. ಕೇಂದ್ರ ಸರ್ಕಾರ ದೇಶದಲ್ಲಿ ಹೊಸ ಶಿಕ್ಷಣ ನೀತಿಯನ್ನು ಜಾರಿ ಮಾಡಲು ಹೊರಟ್ಟಿದೆ ಆದರೆ ರಾಜ್ಯ ಸರ್ಕಾರ ಇದಕ್ಕೆ ವಿರುದ್ದವಾಗಿ ರಾಜ್ಯ ಪಾಲಿಸಿಯನ್ನು ಜಾರಿ ಮಾಡಲು ಹೊರಟ್ಟಿದೆ ಆದರೆ ಇದರ ಬಗ್ಗೆ ಸರ್ಕಾರಕ್ಕೆ ಯಾವುದೇ ಮಾಹಿತಿ ಇಲ್ಲವಾಗಿದೆ. ಇದರ ಬಗ್ಗೆ ವಿಚಾರ ಮಾಡಿದರೂ ಸಹಾ ಸರ್ಕಾರದಿಂದ ಯಾವುದೇ ಉತ್ತರ ಇಲ್ಲವಾಗಿದೆ. ನಾರಾಯಣಸ್ವಾಮಿಯವರನ್ನು ಆಯ್ಕೆ ಮಾಡುವುದರ ಮೂಲಕ ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳುತ್ತಾರೆ. ನೀವುಗಳು ಅವರನ್ನು ಆಯ್ಕೆ ಮಾಡಿದೆ ನಿಮಗೆ ಶಕ್ತಿ ಬರಲಿದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ್ ಷಹಾಪುರ್, ನಗರಸಭಾ ಸದಸ್ಯರಾದ ಹರೀಶ್ ಕೃಷ್ಣಮೂರ್ತಿ, ಪರಶುರಾಮ್, ಶೀಲ, ಬಿಜೆಪಿ ವಕ್ತಾರರಾದ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್, ಜಯ್ಯಣ್ಣ, ನವೀನ್ ಚಾಲುಕ್ಯ, ತಿಪ್ಪೇಸ್ವಾಮಿ, ರಂಗಣ್ಣ, ಬಾಷಾ ಸೇರಿದಂತೆ ಇತರರು ಭಾಗವಹಿಸಿದ್ದರು.

## ಜೆಜೆಎಂ ಕಾಮಗಾರಿ ಪರಿಶೀಲಿಸಿದ ಜಿ.ಪಂ ಸಿಇಓ

» ಚಿತ್ರದುರ್ಗ

ಮೊಳಕಾಲ್ಮುರು ತಾಲ್ಲೂಕಿನ ರಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಕೊಂಡಾಪುರ ಗ್ರಾಮ ಹಾಗೂ ಅಶೋಕ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೌರಸಮುದ್ರ ಗ್ರಾಮದಲ್ಲಿ ಜಲಜೀವನ್ ಮಿಷನ್ ಯೋಜನೆಯ (ಜೆಜೆಎಂ) ಕಾರ್ಯಾತ್ಮಕ ನಳ ಸಂಪರ್ಕ ಕಲ್ಪಿಸಿದ ಕಾಮಗಾರಿಯನ್ನು ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅವರು ಗುರುವಾರ ಪರಿಶೀಲಿಸಿದರು.



ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಹಾಗೂ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ನಳ ಸಂಪರ್ಕ ಕಲ್ಪಿಸಿರುವುದನ್ನು ಪರಿಶೀಲಿಸಿದರು. ನಂತರ ಗ್ರಾಮಸ್ಥರರೊಂದಿಗೆ ಚರ್ಚಿಸಿದಾಗ ಗ್ರಾಮಸ್ಥರು ಜಲಜೀವನ್ ಮಿಷನ್ ಯೋಜನೆಯಿಂದ ಮನೆ ಮನೆಗೆ ನಳ ಸಂಪರ್ಕ ಕಲ್ಪಿಸಿರುವುದರಿಂದ ತುಂಬಾ ಅನುಕೂಲವಾಗಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸನಗೌಡ ಪಾಟೀಲ್, ಸಹಾಯಕ ಕಾರ್ಯಪಾಲಕ ಅಭಿಯಂತರ ಹರೀಶ್ ಚಂದ್, ತಾ.ಪಂ.ಇಒ ಪ್ರಕಾಶ್, ಜಲಜೀವನ್ ಮಿಷನ್ ಯೋಜನೆಯ ಜಿಲ್ಲಾ ಯೋಜನಾ ವ್ಯವಸ್ಥಾಪಕ ಮಂಜುನಾಥ ಎಸ್.ನಾಡರ್, ಎಸ್‌ಬಿಎಂ-ಜಿ ಯೋಜನೆಯ ಜಿಲ್ಲಾ ಐಇಸಿ ಸಮಾಲೋಚಕ ಬಿ.ಸಿ.ನಾಗರಾಜು ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಇದ್ದರು.

## ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡೆ ಮತ್ತು ಸಾಂಸ್ಕೃತಿಕ ಸಂಘದಿಂದ ಪ್ರತಿಭಾವಂತ ಮಕ್ಕಳಿಗೆ ಸನ್ಮಾನ



» ಚಿತ್ರದುರ್ಗ

ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿಗಳಿಗೆ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡೆ ಹಾಗೂ ಸಾಂಸ್ಕೃತಿಕ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿತ್ತು.ಯುವ ಬರಹಗಾರ ವಿಮರ್ಶಕ ಡಾ.ವೇದಾಂತ್ ಏಳಂಜಿ ಮಾತನಾಡಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ವಿಚಾರಗಳನ್ನು ವಿದ್ಯಾರ್ಥಿಗಳು ಪಾಲಿಸಬೇಕು. ಶಿಕ್ಷಣ, ಸಂಘಟನೆ, ಹೋರಾಟದಿಂದ ಮಾತ್ರ ಅಭಿವೃದ್ದಿ ಸಾಧ್ಯ ಎನ್ನುವುದು ಅಂಬೇಡ್ಕರ್‌ರವರ ಮೂಲ ಮಂತ್ರ ಎಂದು ಹೇಳಿದರು.ಪ್ರಾಧ್ಯಾಪಕ ಮಂಜುನಾಥ್ ಆರ್.ಮಾತನಾಡುತ್ತ ಶೈಕ್ಷಣಿಕ ಹಂತದಲ್ಲಿ ಪೋಷಕರು ಮಕ್ಕಳ ಆಸಕ್ತಿಗನುಗುಣವಾಗಿ ಪ್ರೋತ್ಸಾಹಿಸಬೇಕು. ಸ್ಪರ್ಧಾತ್ಮಕ ಯುಗದಲ್ಲಿ ಒಂದೊಂದು ಅಂಕಗಳಿಗೂ ಪ್ರಾಮುಖ್ಯತೆಯಿರುವುದರಿಂದ ವಿದ್ಯಾರ್ಥಿಗಳು ಶಿಕ್ಷಣದ ಕಡೆ ಹೆಚ್ಚಿನ ಗಮನ ಕೊಡಬೇಕೆಂದರು.ಪ್ರಾಧ್ಯಾಪಕ ಲಿಂಗೇಶ್ವರ್ ಮಾತನಾಡಿ ಶಿಕ್ಷಣದಿಂದ ಮಾತ್ರ ಸಮಾಜದಲಿ ಬದಲಾವಣೆ ತರಲು ಸಾಧ್ಯ ಎಂದು ತಿಳಿಸಿದರು.ಸೃಷ್ಟಿ, ರೇಖ, ರಶ್ಮಿ, ಸಿಂಚನ, ಐಶ್ವರ್ಯ, ವರ್ಷಿತ, ಸಂಜನ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.ಗ್ರಾಮ ಪಂಚಾಯಿತಿ ಸದಸ್ಯ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡೆ ಹಾಗೂ ಸಾಂಸ್ಕೃತಿಕ ಸಂಘದ ಅಧ್ಯಕ್ಷ ನಾಗರಾಜ್, ಸಂತೋಷ, ಹರೀಶ್, ಪ್ರಭಾಕರ್, ಮಂಜುನಾಥ, ಮಾರಪ್ಪ, ತಿಪ್ಪೇಸ್ವಾಮಿ, ಗ್ರಾಮದ ಮುಖಂಡರುಗಳಾದ ಕರಿಯಪ್ಪ, ಪರಮೇಶ್ವರಪ್ಪ, ಶಂಕರ ಇವರುಗಳು ವೇದಿಕೆಯಲ್ಲಿದ್ದರು.

## ಆಮಿಷಗಳಿಗೆ ಬಲಿಯಾಗದೆ ಪ್ರಮಾಣಿಕವಾಗಿ ಮತದಾನ ಮಾಡಿ

» ಚಿತ್ರದುರ್ಗ

ಚುನಾವಣೆಯಲ್ಲಿ ಅಭ್ಯರ್ಥಿಗಳು ಬನಿಡುವ ಆಸೆ ಆಮಿಷಗಳಿಗೆ ಬಲಿಯಾಗದೆ ಪ್ರಮಾಣಿಕವಾಗಿ ಮತದಾನ ಮಾಡುವಂತೆ ಆಗ್ನೇಯ ಶಿಕ್ಷಕರ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಎನ್.ಈ ನಟರಾಜ್ ಮತದಾರರಲ್ಲಿ ಮನವಿ ಮಾಡಿದ್ದಾರೆ.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಸಹಾ ಮೂಲತ ಚಿತ್ರದುರ್ಗ ಜಿಲ್ಲೆಯವನಾಗಿದ್ದು ಈಗ ದಾವಣಗೆರೆಯಲ್ಲಿದ್ದೇನೆ 38 ವರ್ಷಗಳ ಕಾಲ ಶಿಕ್ಷಣ ಇಲಾಖೆಯಲ್ಲಿ ಸೇವೆಯನ್ನು ಮಾಡಿದ್ದೇನೆ ಶಿಕ್ಷಕರ ಸಮಸ್ಯೆಗಳ ಬಗ್ಗೆ ಅರಿವು ಇದೆ. ಇದ್ದಲ್ಲದೆ ವಿವಿಧ ರೀತಿಯ ಸಂಘಟನೆಯಲ್ಲಿ ಗುರುತಿಸುವುದರ ಮೂಲಕ ನೌಕರರ ಬೇಡಿಕೆ ಈಡೇರಕೆ ಬಗ್ಗೆ ಹೋರಾಟವನ್ನು ಮಾಡಲಾಗಿದೆ. ಈ ಮುಂಚೆ ಈ ಚುನಾವಣೆಗಳು ನಡೆಯುವುದೇ ಗೊತ್ತಾಗುತಿರಲಿಲ್ಲ ಆದರೆ ಇತ್ತಿಚೆಗೆ ಇದಕ್ಕೆ ತನ್ನದೆ ಆದ ಗತ್ತು ಬಂದಿದೆ ಮತದರರು ಸಹಾ ಅಭ್ಯರ್ಥಿಗಳು ನೀಡುವ ವಿವಿಧ ರೀತಿಯ ಅಸೆ ಆಮಿಷಗಳಿಗೆ ಬಲಿಯಾಗಿ ಅಸಮರ್ಥರನ್ನು ಗೆಲ್ಲಿಸುತ್ತಿದ್ದಾರೆ ಇದು ನಮ್ಮ ದುರಂತವಾಗಿದೆ ಎಂದರು.


ಪ್ರಮುಖ ಸುದ್ದಿ

### ಸಿಐಟಿಯು ಕಾರ್ಮಿಕ ಸಂಘಟನೆಯಿಂದ 45ನೇ ಮೇ ದಿನಾಚರಣೆ

# ಕೇಂದ್ರ ಸರ್ಕಾರದಿಂದ ಕಾರ್ಮಿಕರ ಶಕ್ತಿ ಕುಂದಿಸುವ ಕಾರ್ಯ

» ಚಳ್ಳಕೆರೆ

ಕಳೆದ ಹತ್ತುವರ್ಷಗಳಿಂದ ಕೇಂದ್ರದಲ್ಲಿ ಆಡಳಿತನಡೆಸುತ್ತಿರುವಎನ್‌ಡಿಎಸರ್ಕಾರದ ಪ್ರಧಾನಮಂತ್ರಿನರೇಂದ್ರಮೋದಿಕಾರ್ಮಿಕರ ವಿರೋಧಿ ಮಸೂದೆಗಳನ್ನು ಜಾರಿಗೆ ತರುವ ಮೂಲಕ ಕಾರ್ಮಿಕ ಸಮೂಹದ ಮೇಲೆ ಗದಾಪ್ರಹಾರ ಮಾಡಿದ್ದಾರೆ. ನಿರಂತರ ಬೆಲೆ ಏರಿಕೆಯಿಂದ ಕಾರ್ಮಿಕರ ಸಮೂಹ ತತ್ತರಿಸಿದೆ ಎಂದು ಸಿಐಟಿಯು ಸಂಘಟನೆಯರಾಜ್ಯಪ್ರಧಾನಕಾರ್ಯದರ್ಶಿ ಮಹೇಶ್‌ಪತ್ತಾರ್ ತಿಳಿಸಿದರು.





ಅವರು, ಗುರುವಾರ ಎಪಿಎಂಸಿ ಮಾರುಕಟ್ಟೆ ಆವರಣ ಶ್ರಮಿಕರ ಭವನದಲ್ಲಿ ಸಿಐಟಿಯು ಕಾರ್ಮಿಕ ಸಂಘಟನೆ ಹಮ್ಮಿಕೊಂಡಿದ್ದ 45ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷ ಕಾರ್ಮಿಕ ಸಂಘಟನೆಗಳು ಮೇ ದಿನಾಚರಣೆ ಮೂಲಕ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಕಾರ್ಮಿಕ ಸಂಘಟನೆಗಳ ಶಕ್ತಿಯನ್ನು ಕುಗ್ಗಿಸುವ ಕೆಲಸ ಕೇಂದ್ರ ಸರ್ಕಾರ ಮಾಡುತ್ತಿದೆ. ಆದರೆ, ಕಾರ್ಮಿಕರು ಹೆಚ್ಚು ಸಂಘಟಿತರಾಗಿ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ನಡೆಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಿಐಟಿಯು ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಟಿ.ತಿಪ್ಪೇಸ್ವಾಮಿ, ಚಳ್ಳಕೆರೆ ತಾಲ್ಲೂಕಿನಲ್ಲಿ ಕಳೆದ ಸುಮಾರು 45 ವರ್ಷಗಳಿಂದ ನಮ್ಮಕಾರ್ಮಿಕ ಸಂಘಟನೆ ಅಸ್ಥಿತ್ವದಲ್ಲಿದೆ. ಕಾರ್ಮಿಕರಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ನಿರಂತರ ಹೋರಾಟ ನಡೆಸಿಕೊಂಡು ಬಂದಿದ್ದೇವೆ. ಸಿಐಟಿಯು ಸಂಘಟನೆ ಅತ್ಯಂತ ದಕ್ಷತೆ, ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಾ ಸಾವಿರಾರು ಹಮಾಲಿರಿಗೆ ನೆರವಾಗಿದೆ. ಕಾರ್ಮಿಕರ ಸಂಘಟನೆ ಇಲ್ಲದೇ ಇದ್ದರೆ ಕಾರ್ಮಿಕರ ಮೇಲೆ ದೌರ್ಜನ್ಯ ಹೆಚ್ಚುತ್ತಿಲ್ಲದೆ, ಕಾರ್ಮಿಕರನ್ನುಬಲಿಪಶುಮಾಡಲಾಗುತ್ತಿತ್ತು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಅಧ್ಯಕ್ಷ ಟಿ.ನಿಂಗಣ್ಣ, ಧ್ವಜಾರೋಹಣದಮೂಲಕಕಾರ್ಯಕ್ರಮಕ್ಕೆ ಚಾಲನೆ ನೀಡಿ, ಕಾರ್ಮಿಕರ ಸಮಸ್ಯೆಗಳಿಗೆ ಸಂಘಟನೆಯಮೂಲಕವೇಪರಿಹಾರವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಸಿಐಟಿಯು ಪ್ರಾಮಾಣಿಕ ಹೋರಾಟ ನಡೆಸುತ್ತಿದೆ, ಕಾರ್ಮಿಕರು ಸಂಘಟನೆಯ ಮೇಲೆ ಹೆಚ್ಚು ವಿಶ್ವಾಸವಿಟ್ಟು ಸದಾಬೆಂಬಲಿಸಬೇಕು ಎಂದರು. ಸಿಐಟಿಯು ಸಂಘಟನೆಯ ಪ್ರಮುಖರಾದ ಎಚ್.ಓ.ನಾಗರಾಜು, ಚನ್ನಕೇಶವ, ಬೋರಯ್ಯ, ಇಂದ್ರಮ್ಮ ಮುಂತಾದವರು ಉಪಸ್ಥಿತರಿದ್ದರು.

# ರಾಷ್ಟ್ರೀಯತೆ ಎಂಬ ಪರಿಕಲ್ಪನೆಯ ಸುತ್ತಾ.......



# ರಾಷ್ಟ್ರ ಅಥವಾ ದೇಶ ಎಂದರೇನು?





> ನಾವು ವಾಸಿಸುವ ರಾಷ್ಟ್ರದ ಬಗೆಗಿನ ಪ್ರಾಮಾಣಿಕ ಪ್ರೀತಿ ಗೌರವ ಅಭಿಮಾನ, ರಕ್ಷಣೆ ಸಮಯ ಸಂದರ್ಭದಲ್ಲಿ ತ್ಯಾಗ, ಒಗಟ್ಟು ಮತ್ತು ಅನಿವಾರ್ಯದಲ್ಲಿ ಪ್ರಾಣತ್ಯಾಗ ಮುಂತಾದ ಒಟ್ಟು ಭಾವಗಳ ಮೊತ್ತವೇ ರಾಷ್ಟ್ರೀಯತೆ.

ರಾಷ್ಟ್ರ ಎಂಬುದು ಕಲ್ಲು ಮಣ್ಣು ಬೆಟ್ಟ ಗುಡ್ಡ ನದಿ ಕಾಡುಗಳ ಒಂದು ಪ್ರದೇಶವೇ ಅಥವಾ ರಾಷ್ಟ್ರ ಎಂಬುದು ಆ ನೆಲದಲ್ಲಿ ಬದುಕುತ್ತಿರುವ ಎಲ್ಲಾ ಜೀವ ಚರಗಳ ವಾಸಸ್ಥಾನವೇ ಅಥವಾ ರಾಷ್ಟ್ರ ಎಂಬುದು ಋತುಮಾನಗಳ ಹಗಲು ರಾತ್ರಿಗಳ ಪ್ರಾಕೃತಿಕ ಸೃಷ್ಟಿಯೇ ಅಥವಾ ರಾಷ್ಟ್ರ ಎಂಬುದು ದೇವರು ಧರ್ಮ ಸಂವಿಧಾನ ಆಡಳಿತ ಮುಂತಾದ ನೀತಿ ನಿಯಮಗಳ ಪ್ರಯೋಗ ಶಾಲೆಯೇ ? ಹೀಗೆ ಹಲವಾರು ಪ್ರಶ್ನೆಗಳು ಸಹಜವಾಗಿ ಉದ್ಭವವಾಗುತ್ತದೆ.

ಬಹುಶಃ ಹೀಗೆ ಸೃಷ್ಟಿಯಾಗುವ ಎಲ್ಲಾ ಪ್ರಶ್ನೆಗಳು ಅಂಶಗಳು ಮುಂತಾದ ಎಲ್ಲವೂ ಸಮನ್ವಯಗೊಂಡ ವಿಶಾಲ ಅರ್ಥದ ಸರಳ ರೂಪವೇ ಒಂದು ರಾಷ್ಟ್ರ ಅಥವಾ ದೇಶ ಎಂದು ಪರಿಗಣಿಸಬಹುದು.

ಪ್ರಾಕೃತಿಕ ಪ್ರದೇಶ – ಜೀವಚರಗಳು ಮತ್ತು ಆಡಳಿತ ವ್ಯವಸ್ಥೆಯ ಸಮ್ಮಿಲನವೇ ದೇಶ ಎಂದು ಅತ್ಯಂತ ಸರಳವಾಗಿ ಹೇಳಬಹುದು.

ಹಾಗಾದರೆ ರಾಷ್ಟ್ರೀಯತೆ ಎಂದರೇನು ?

ರಾಷ್ಟ್ರ ಧ್ವಜ ಮತ್ತು ರಾಷ್ಟ್ರ ಗೀತೆಗೆ ಗೌರವ ನೀಡುವುದು, ರಾಷ್ಟ್ರದ ಪರವಾಗಿ ಘೋಷಣೆ ಕೂಗುವುದು, ಪ್ರತಿಭಟಿಸುವುದು, ಪ್ರತಿನಿತ್ಯ ರಾಷ್ಟ್ರದ ಜಪ ಮಾಡುವುದು ಮಾತ್ರವೇ ರಾಷ್ಟ್ರೀಯತೆಯೇ ?

ನಾವು ವಾಸಿಸುವ ರಾಷ್ಟ್ರದ ಬಗೆಗಿನ ಪ್ರಾಮಾಣಿಕ ಪ್ರೀತಿ ಗೌರವ ಅಭಿಮಾನ, ರಕ್ಷಣೆ ಸಮಯ ಸಂದರ್ಭದಲ್ಲಿ ತ್ಯಾಗ, ಒಗಟ್ಟು ಮತ್ತು ಅನಿವಾರ್ಯದಲ್ಲಿ ಪ್ರಾಣತ್ಯಾಗ ಮುಂತಾದ ಒಟ್ಟು ಭಾವಗಳ ಮೊತ್ತವೇ ರಾಷ್ಟ್ರೀಯತೆ.

ಈ ನಿಟ್ಟಿನಲ್ಲಿ ಭಾರತದ ಜನರ ( ಎಲ್ಲಾ ಜಾತಿ ಧರ್ಮ ಮತ ಪಂಥ ಭಾಷೆ ಪ್ರದೇಶಗಳನ್ನು ಒಳಗೊಂಡು ) ರಾಷ್ಟ್ರೀಯ ಪ್ರಜ್ಞೆಯ ಗುಣಮಟ್ಟ ಹೇಗಿದೆ ? ಯಾವ ದಿಕ್ಕಿನಲ್ಲಿ ಸಾಗುತ್ತಿದೆ ? ಅದರ ಆಳ ವಿಸ್ತಾರ ವ್ಯಾಪ್ತಿ ಗಟ್ಟಿತನ ನೈಜತೆ ಎಷ್ಟು ? ಅದರ ಭ್ರಮೆ ವಾಸ್ತವ ಪೊಳ್ಳುತನ ಕಪಟತನ ಅ ಸ್ವಾರ್ಥ ಎಷ್ಟು ?

ಅದರೊಳಗಿನ ರಾಜಕೀಯ ಎಷ್ಟು ?

ಜೊತೆಗೆ ರಾಷ್ಟ್ರೀಯತೆಯ ವಿರೋಧ ಪದದ ಅರ್ಥ ರಾಷ್ಟ್ರ ದ್ರೋಹ ಎಂದರೇನು ? ಅದರ ಪರಿಕಲ್ಪನೆ ಯಾವ ಅಂಶಗಳನ್ನು ಒಳಗೊಂಡಿದೆ ?

ಈ ಬಗ್ಗೆ ಈ ಕ್ಷಣದ ಅನುಭವದ ಆಧಾರದ ಮೇಲೆ ಒಂದು ಅವಲೋಕನ......

( ಇದು ಭಾರತ ಒಂದು ಗಣರಾಜ್ಯಗಳ ಒಕ್ಕೂಟವಾಗಿ ರಚನೆಯಾದ ಮತ್ತು ಸಂವಿಧಾನ ಅಂಗೀಕಾರವಾದ ದಿನದಿಂದ ಆದ ಭಾರತ ದೇಶಕ್ಕೆ ಮಾತ್ರ ಅನ್ವಯಿಸುತ್ತದೆ )

ನೇರವಾಗಿ ಮತ್ತು ಸ್ಪಷ್ಟವಾಗಿ ಹೇಳಬೇಕೆಂದರೆ....

ರಾಷ್ಟ್ರೀಯತೆಯ ಪರಿಕಲ್ಪನೆ ಸರಳವೂ ಹೌದು ಸಂಕೀರ್ಣವೂ ಹೌದು. ನೇರ ದೃಷ್ಟಿಕೋನದಿಂದ ಸಹಜವಾಗಿ ಯೋಚಿಸಿದರೆ ಒಂದು ಅರ್ಥ ಹೊಳೆಯುತ್ತದೆ. ಅದನ್ನೇ ರಾಜಕೀಯಗೊಳಿಸಿ ಸಿದ್ದಾಂತಗಳ ಹಿನ್ನೆಲೆಯಲ್ಲಿ ವಾದ ಮಾಡಿದರೆ ಹೆಚ್ಚು ಸಂಕೀರ್ಣವಾಗಿ ಭಾಸವಾಗುತ್ತದೆ. ಉದಾಹರಣೆಗೆ....

ರಾಷ್ಟ್ರೀಯ ಸ್ವಯಂ ಸೇವಕ ಸಂಘ ಮತ್ತು ಅದರ ಪರಿವಾರದವರು ಸೈದ್ಧಾಂತಿಕ ಭಿನ್ನಾಭಿಪ್ರಾಯದ ಕಾರಣದಿಂದಾಗಿ ಹೇಳುವಂತೆ ಕಮ್ಯೂನಿಸ್ಟ್‌ರು, ಮುಸ್ಲಿಂ ಕ್ರಿಶ್ಚಿಯನ್ ಸಂಘಟನೆಗಳು ಕೆಲವೊಮ್ಮೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಸೇರಿ ಕೆಲವು ರಾಜಕೀಯ ಪಕ್ಷಗಳನ್ನು ದೇಶದ್ರೋಹಿಗಳು ಎಂದು ಕರೆಯುತ್ತಾರೆ. ಅದಕ್ಕೆ ವಿರುದ್ಧವಾಗಿ ಸಂಘ ಪರಿವಾರ ಮತ್ತು ಅದರ ಚಟುವಟಿಕೆಗಳನ್ನು ಈ ಪಕ್ಷಗಳು ಸಹ ರಾಷ್ಟ್ರ ದ್ರೋಹಿಗಳು ಎಂದೇ ಕರೆಯುತ್ತಾರೆ. ಅಂದರೆ ರಾಷ್ಟ್ರೀಯತೆ ಮತ್ತು ರಾಷ್ಟ್ರ ದ್ರೋಹ ಇಲ್ಲಿ ಹೆಚ್ಚು ಸಂಕೀರ್ಣ ಮತ್ತು ಅನುಮಾನಾಸ್ಪದವಾಗುತ್ತದೆ. ಅದರಲ್ಲೂ ಸಮೂಹ ಸಂಪರ್ಕ ಕ್ರಾಂತಿಯ ಈ ಸಂದರ್ಭದಲ್ಲಿ ಇದು ಸಾಮಾನ್ಯ ಜನರಲ್ಲಿ ಅತ್ಯಂತ ಕ್ಲಿಷ್ಟಕರ ಅರ್ಥಗಳನ್ನು ಹೊಮ್ಮಿಸುತ್ತಿದೆ. ಸರಿಯಾದ ನಿರ್ಧಾರಕ್ಕೆ ಬರದೆ ಗೊಂದಲಕ್ಕೊಳಗಾಗಿದ್ದಾರೆ.

ರಾಷ್ಟ್ರೀಯತೆ ಎಂದರೆ ರಾಷ್ಟ್ರದ ಮೇಲಿನ ಪ್ರೀತಿ ಎಂಬುದು ನಿಜ. ಆದರೆ ಅದನ್ನು ವ್ಯಕ್ತಪಡಿಸುವ ರೀತಿ ಹೇಗೆ. ಅದನ್ನು ಅಳೆಯುವ ಮಾನದಂಡ ಏನು ? ಅವರವರ ಭಾವಕ್ಕೆ ಅವರವರ ಮೂಗಿನ ನೇರಕ್ಕೆ ರಾಷ್ಟ್ರೀಯತೆ ಮತ್ತು ರಾಷ್ಟ್ರ ದ್ರೋಹವನ್ನು ಅರ್ಥೈಸುವುದಾದರೆ ಅದು ಮತ್ತೊಂದು ಸಂಘರ್ಷಕ್ಕೆ ದಾರಿ ಮಾಡಿಕೊಡುತ್ತದೆ.

ನಮ್ಮದು ಹಿಂದು ಧರ್ಮ ಅಥವಾ ಸನಾತನ ಧರ್ಮದ ಆಧಾರದಲ್ಲಿ ನಡೆಯುತ್ತಿರುವ ಅಥವಾ ನಡೆಯಬೇಕಾದ ದೇಶ ಎನ್ನುವುದು ರಾಷ್ಟ್ರೀಯತೆಯೇ ? ರಾಷ್ಟ್ರ ವಿರೋಧಿಯೇ ? ಅಪರಾಧವೇ ? ಸರಿಯಾದ ನಿಲುವೇ ?

ನಮ್ಮದು ಇಸ್ಲಾಂ ಧರ್ಮ. ನಾವು ಷರಿಯತ್ ನಿಯಮದಂತೆನಾವುಬದುಕುತ್ತೇವೆ.ಸಂವಿಧಾನವನ್ನೂ ಗೌರವಿಸುತ್ತೇವೆ. ಆದರೆ ಧಾರ್ಮಿಕ ಸ್ವಾತಂತ್ರ್ಯದ ಅಡಿಯಲ್ಲಿ ಖುರಾನ್ ನಮಗೆ ಅತ್ಯಂತ ಶ್ರೇಷ್ಠ ಎನ್ನುವ ಭಾವನೆ ಮತ್ತು ವರ್ತನೆ ರಾಷ್ಟ್ರೀಯತೆಯೇ ? ದೇಶ ದ್ರೋಹವೇ ? ಅಪರಾಧವೇ ? ಸರಿಯಾದ ನಿಲುವೇ ? ಇದೇ ರೀತಿ ಕ್ರಿಶ್ಚಿಯನ್ ಭೌದ್ಧ ಜೈನ್ ಸಿಖ್ ಪಾರ್ಸಿ ಬಸವ ಧರ್ಮದ ರಾಷ್ಟ್ರ ಎಂಬ ಬಹಿರಂಗ ಭಾವನೆ ಮತ್ತು ವರ್ತನೆ ಸಂವಿಧಾನಾತ್ಮಕವಾಗಿ ಎಷ್ಟು ಸರಿ ? ಎಷ್ಟು ತಪ್ಪು ? ಎಷ್ಟು ಸಹನೀಯ ?

ಮದರಸಾಗಳಲ್ಲಿ ಖುರಾನ್, ಕ್ರಿಶ್ಚಿಯನ್ ಶಾಲೆಗಳಲ್ಲಿ ಬೈಬಲ್, ಸರ್ಕಾರಿ ಶಾಲೆಗಳಲ್ಲಿ ಭಗವದ್ಗೀತೆ ಭೋದಿಸುವುದು ಸಂವಿಧಾನಕ್ಕೆ ಮಾಡುವ ಅಪಮಾನವೇ ಅಥವಾ ಅದಕ್ಕೆ ಪೂರಕವೇ ? ಭವಿಷ್ಯದಲ್ಲಿ ಇದರ ಪರಿಣಾಮ ಊಹಿಸಿದರೆ ಇದು ರಾಷ್ಟ್ರೀಯತೆಯ ಪರಿಕಲ್ಪನೆಗೆ ಅಪಾಯಕಾರಿ ಎಂದೆನಿಸುವುದಿಲ್ಲವೇ ಎಂಬ ಪ್ರಶ್ನೆ ಉದ್ಭವಿಸುತ್ತದೆ.....

ನಾವು ಭಾರತೀಯರು ಮತ್ತು ಭಾರತದ ಸಂವಿಧಾನದ ನೀತಿ ನಿಯಮಗಳಿಗೆ ನಿಷ್ಠರು. ಅದೇ ಭಾರತದ ನಿಜವಾದ ಆತ್ಮ ಎಂದು ಪ್ರತಿಪಾದಿಸುವವರು ನಿಜವಾದ ರಾಷ್ಟ್ರೀಯವಾದಿಗಳು ಎನ್ನಬಹುದೇ.....

ದೇಶ ಮತ್ತು ಧರ್ಮದ ಆಯ್ಕೆಯಲ್ಲಿ ದೇಶ ಮೊದಲು ಎನ್ನುವವರು ರಾಷ್ಟ್ರೀಯವಾದಿಗಳು, ಧರ್ಮ ಮುಖ್ಯ ಎನ್ನುವವರು ರಾಷ್ಟ್ರ ವಿರೋಧಿಗಳು. ಎರಡೂ ಬೇಕು ಎನ್ನುವವರು ಅಪಾಯಕಾರಿಗಳು ಎಂದು ಪರಿಗಣಿಸಬಹುದೇ ಅಥವಾ ಅಥವಾ ಅದು ಅವರವರ ಭಾವ ಸ್ವಾತಂತ್ರ್ಯ ಎಂದು ನಿರ್ಲಕ್ಷಿಸಬಹುದೇ....

ಸರ್ಕಾರಿ ಸೇವಕರಾಗಿ ಸರ್ಕಾರದ ಸಂಬಳ ಪಡೆದು ತಮ್ಮ ಕಾಯಾ ವಾಚಾ ಮನಸಾ ಈ ದೇಶದ ಪ್ರಜೆಗಳ ಸೇವೆ ಮಾಡುವವರು ನಿಜವಾದ ರಾಷ್ಟ್ರೀಯವಾದಿಗಳು. ಇದನ್ನು ಹೊರತುಪಡಿಸಿ ಯಾವುದೇ ರೀತಿಯ ಲಂಚ ಮುಂತಾದ ಆಮಿಷಗಳಿವೆ ಒಳಗಾಗಿ ಜನರನ್ನು ಶೋಷಣೆಗೆ ಒಳಪಡಿಸುವವರು ಅಪರಾಧಿಗಳು ಮತ್ತು ಪರೋಕ್ಷವಾಗಿ ದೇಶದ್ರೋಹಿಗಳು ಎಂದು ಭಾವಿಸಬಹುದೇ....

ಚುನಾವಣೆಯಲ್ಲಿ ಸ್ಪರ್ಧಿಸಿ ತಮ್ಮ ಪ್ರತಿಭೆ ಸಾಮರ್ಥ್ಯ ಸೇವಾ ಮನೋಭಾವದಿಂದ ಆಯ್ಕೆಯಾಗಿ ಸಂವಿಧಾನ ಬದ್ದವಾಗಿ ನಿಷ್ಠೆಯಿಂದ ಕೆಲಸ ಮಾಡುವ ಎಲ್ಲಾ ಜನ ಪ್ರತಿನಿಧಿಗಳು ರಾಷ್ಟ್ರೀಯವಾದಿಗಳು. ಚುನಾವಣೆಯಲ್ಲಿ ಹಣ ಹೆಂಡ ಜಾತಿ ಧರ್ಮ ಸುಳ್ಳು ಭರವಸೆಗಳ ಮೂಲಕ ಆಯ್ಕೆಯಾಗುವವರು ಮತ್ತು ತದನಂತರ ತಮ್ಮ ಸ್ಥಾನದಿಂದ ಭ್ರಷ್ಟ ಮತ್ತು ಸ್ವಜನ ಪಕ್ಷಪಾತ ಮಾಡುವವರು ಅಪರಾಧಿಗಳು ಮತ್ತು ಪರೋಕ್ಷ ದೇಶ ದ್ರೋಹಿಗಳು ಎಂದು ಕರೆಯಬಹುದೇ....

ಚುನಾವಣೆಯಲ್ಲಿ ವ್ಯಕ್ತಿಯ ವ್ಯಕ್ತಿತ್ವ ಘನತೆ ಒಳ್ಳೆಯತನಗಳನ್ನು ನಿರ್ಲಕ್ಷಿಸಿ ಆತನ ಜಾತಿ ಧರ್ಮ ಹಣ ತೋಳ್ಬಲದ ಪ್ರಭಾವಕ್ಕೆ ಒಳಗಾಗಿ ಮತ ಚಲಾಯಿಸುವುದು ಕೂಡ ಅತ್ಯಂತ ಅಜ್ಞಾನ ಅಪರಾಧ ಮತ್ತು ಪರೋಕ್ಷ ದೇಶದ್ರೋಹವೇ ಎಂದೂ ಭಾವಿಸಬಹುದಲ್ಲವೇ......

ಲಾಭದ ದುರಾಸೆಯಿಂದ ನೀರು ಗಾಳಿ ಆಹಾರಗಳನ್ನು ಕಲಬೆರಕೆ ಮಾಡಿ, ಖೋಟಾ ನೋಟು ಮುದ್ರಿಸಿ ಇಡೀ ವ್ಯವಸ್ಥೆಯನ್ನು ಕಲ್ಮಶ ಮಾಡಿ ದೇಹ ಮನಸ್ಸುಗಳನ್ನು ಮಲಿನಗೊಳಿಸುವುದು ರಾಷ್ಟ್ರ ದ್ರೋಹ ಎಂದು ಪರಿಗಣಿಸಬಹುದೇ ? ಏಕೆಂದರೆ ಇದರಿಂದ ದೇಶ ದುರ್ಬಲವಾಗುವುದಿಲ್ಲವೇ ?........

ಒಬ್ಬರಿಗೊಬ್ಬರು ದ್ವೇಷಿಸುತ್ತಾ, ಬಹಿಷ್ಕಾರಗಳನ್ನು ಹಾಕುತ್ತಾ, ಅಸಹಿಷ್ಣುತೆ ವ್ಯಕ್ತಪಡಿಸುತ್ತಾ, ಆಡಳಿತ ವ್ಯವಸ್ಥೆಯನ್ನು ಪ್ರಶ್ನಿಸಿದ ಮಾತ್ರಕ್ಕೆ ಅವರನ್ನು ದೇಶದ್ರೋಹಿಗಳು ಎಂದು ಆರೋಪ ಮಾಡುತ್ತಾ, ಧರ್ಮದ ಹುಳುಕುಗಳನ್ನು ಹೇಳಿದರೆ ಅದನ್ನು ಧರ್ಮ ದ್ರೋಹ ಎನ್ನುತ್ತಾ ಇಡೀ ದೇಶದಲ್ಲಿ ಅಸಹನೀಯ ವಾತಾವರಣ ಸೃಷ್ಟಿಸುತ್ತಿರುವವರು ಮೇಲ್ನೋಟಕ್ಕೆ ರಾಷ್ಟ್ರೀಯವಾದಿಗಳು ಎನಿಸಿದರು ಆಂತರ್ಯದಲ್ಲಿ ಅವರು ದೇಶಕ್ಕೆ ಮಾರಕ ಎಂದಾಗುವುದಿಲ್ಲವೇ......

ಹೀಗೆ ದೀರ್ಘವಾಗಿ ಬೆಳೆಯುತ್ತಾ ಹೋಗುವ ಪ್ರಶ್ನೆಗಳಿಗೆ ಉತ್ತರ ಹುಡುಕುತ್ತಾ ಸಾಗಿದರೆ ರಾಷ್ಟ್ರೀಯತೆ ಮತ್ತು ರಾಷ್ಟ್ರ ದ್ರೋಹದ ವಾಸ್ತವದ ಹತ್ತಿರಕ್ಕೆ ಸಾಗಬಹದು.

ಆದರೂ ಅತ್ಯಂತ ಸರಳವಾಗಿ ಹೇಳುವುದಾದರೆ....

ರಾಷ್ಟ್ರೀಯತೆಗೆ ಅತಿ ಹತ್ತಿರದ ಚಿಂತನೆಗಳೆಂದರೆ ಸ್ವಾಮಿ ವಿವೇಕಾನಂದರು ಪ್ರತಿಪಾದಿಸಿದ ಭಾರತೀಯತೆ ಮತ್ತು ಮಹಾತ್ಮ ಗಾಂಧಿಯವರು ನಡೆ ನುಡಿಗಳು ನಿಜಕ್ಕೂ ಭಾರತದ ರಾಷ್ಟ್ರೀಯತೆಯ ನೈಜ ಅರ್ಥವನ್ನು ಕೊಡುತ್ತದೆ. ಜೊತೆಗೆ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಅಡಕ ಮಾಡಿರುವ " ಭಾರತೀಯ ಪ್ರಜೆಗಳಾದ ನಾವು " ಎಂಬ ಪೀಠಿಕೆ ಮತ್ತು ಹಕ್ಕುಗಳು ಹಾಗು ಕರ್ತವ್ಯಗಳ ಮಾರ್ಗದರ್ಶನ ರಾಷ್ಟ್ರೀಯತೆಯ ಸ್ಪಷ್ಟ ಮತ್ತು ನಿಕಟ ಅರ್ಥವನ್ನು ಹೊಮ್ಮಿಸುತ್ತದೆ.

ಗೌತಮ ಬುದ್ದರ ಮಾನಸಿಕತೆ ಮತ್ತು ಬಸವಣ್ಣನವರ ಸಾಮಾಜಿಕತೆ ರಾಷ್ಟ್ರೀಯತೆಯ ಚಿಂತನೆಗೆ ಪೂರಕವಾಗಿ ಕೆಲಸ ಮಾಡುತ್ತದೆ.

ಇದು ಇನ್ನೂ ವಿಸ್ತಾರಗೊಳ್ಳುವ ಒಂದು ಆಳ ವಿಷಯ. ಮುಂದೆ ಈ ಬಗ್ಗೆ ಮತ್ತೊಮ್ಮೆ ಚರ್ಚಿಸೋಣ. ನಿಮ್ಮ ಅಭಿಪ್ರಾಯಗಳಿಗೆ ಮುಕ್ತ ಸ್ವಾಗತ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T